ಸಂಪುಟ : 9   ಸಂಚಿಕೆ 48   ಪುಟ : 4   ಬೆಲೆ: 3.00   ಗುರುವಾರ ಮಾರ್ಚ್ 21 2024   Mob : 9448326533- 9019256545   ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYA SAKSHI KANNADA DAILY   ಕನ್ನಡ ದಿನಪತ್ರಿಕೆ

WALK IN INTERVIEW

Vacancy open

Bagalkot , Bijapur , Bidar , Kalaburgi, Mangalore , Belgaum

(Required For Bank Recovery and Collections)

- Filed collection Executive
- Two wheeler Must
- Salary up to 15000/- & Attractive Incentives Facility

Contact Number : 8310034934

Volume : 9   Issue : 48   Pages : 4   Price : 3.00   Thursday March 21 2024   Gadag   RNINo:KARKAN/2015/63412   E-mail: vijayasakshidaily@gmail.com   Post Regn.No: GDG/72/2023-25

## ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಬೆಟಗೇರಿ ಅವಳಿ ನಗರದಲ್ಲಿ ಮಾರ್ಚ್ 21ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು.

ಸ್ಥಳಗಳ ವಿವರ : ವಾರ್ಡ್ ನಂ. 22ರಲ್ಲಿ 1ರಿಂದ 5ರವರೆಗಿನ ಲೈನ್, ಗಿರಣಿಯವರ ಲೈನ್, ದಖನಿಯವರ ಲೈನ್, ಈಶ್ವರಗುಡಿ ಲೈನ್, ಧಾರವಾಡದವರ ಲೈನ್, ಶುದ್ಧ ನೀರಿನ ಘಟಕದ ಲೈನ್,

ವಾರ್ಡ್ ನಂ. 01ರಲ್ಲಿ ಎಸ್.ಎಮ್.ಕೃಷ್ಣಾ ನಗರ ಕೆಳಗಿನ ಭಾಗ, ಮೇಲಿನ ಭಾಗ, ವಾರ್ಡ್ ನಂ. 06ರಲ್ಲಿ ಸಿದ್ದಲಿಂಗನಗರ, ಕನ್ಯಾಳ ಅಗಸಿ ಲೈನ್, ಭಜಂತ್ರಿ ಓಣಿ, ಅಂಬೇಡ್ಕರ್ ನಗರ, ಹೂಲಿ ಅವರ ಲೈನ್, ಜಮಲಮ್ಮನ ಗುಡಿ ಲೈನ್, ಹಾದಿಮನಿಯವರ ಲೈನ್, ಸಿದ್ಧಲಿಂಗನಗರದ ಭಾಗ-1, 2 ನ್ಯಾವಳ್ಳಿಯವರ ಲೈನ್, ಮಂಜುನಾಥನವರ ಲೈನ್, ಕಡಿಯವರ ಲೈನ್, ರೊಟ್ಟಿಯವರ ಲೈನ್, ಪಿ.ಪಿ.ಗುಡಿ ಲೈನ್,

ವಾರ್ಡ್ ನಂ. 29 ಸಾಯಿನಾಥ್ ನಗರ, ವಾರ್ಡ್ ನಂ. 19, 24, 25–ಹಾಳದಿಬ್ಬ ಭಾಗ–1,2,3, ಮದ್ಲಿ ಓಣಿ, ಜಿ.ಎಸ್. ಹಿರೇಮಠ, ಅಬ್ಬಿಗೇರಿ, ಕರುಗಲ್, ಕರೀದೇವರ ಗುಡಿ, ಜೀರ ಓಣಿ, ಗಣಪತಿ ಗುಡಿ, ಹನುಮನ ಗರಡಿ, ಜವಳಿ ಬಜಾರ, ಕುರಬರ ಗರಡಿ, ಮಾಬೂಸುಭಾನಿ ಕಟ್ಟಿ, ಕೊಪ್ಪಳವರ ಲೈನ್, ಖಾನತೋಟ ಭಾಗ–1.

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸಲು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳ ಗಮನಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದಲ್ಲಿ ಎಸ್.ಎಸ್.ಎಲ್.ಸಿ. ಅಂತಿಮ ಪರೀಕ್ಷೆಗಳು ಮಾರ್ಚ್ 25ರಿಂದ ಪ್ರಾರಂಭವಾಗುತ್ತಿದ್ದು, ಈ ಸಂಬಂಧ ವಿದ್ಯಾರ್ಥಿಗಳಿಗೆ ಅವರ ವಿದ್ಯಾ ಸಂಸ್ಥೆಯ ಹೊರತಾಗಿಯೂ ಇತರೆ ವಿದ್ಯಾ ಸಂಸ್ಥೆಗಳಲ್ಲಿ ಪರೀಕ್ಷಾ ಕೇಂದ್ರಗಳ ನಿಯೋಜನೆಯಾಗಿರುವುದಾಗಿ ಪದವಿ ಶಿಕ್ಷಣ ಇಲಾಖೆಯವರು ತಿಳಿಸಿದ್ದಾರೆ.

ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಕ.ರಾ.ರ.ಸಂಸ್ಥೆ ನಿಗಮವು ಎಸ್.ಎಸ್.ಎಲ್.ಸಿ. ಪರೀಕ್ಷೆ ನಡೆಯುವ ದಿನಾಂಕಗಳಂದು ಮಾರ್ಚ್ 25 ರಿಂದ ಎಪ್ರಿಲ್ 6 ರವರೆಗೆ ಪರೀಕ್ಷೆಗೆ ಹಾಜರಾಗುವ ಎಲ್ಲ ಎಸ್.ಎಸ್.ಎಲ್.ಸಿ. ವಿದ್ಯಾರ್ಥಿಗಳು ತಮ್ಮ ವಾಸಸ್ಥಳದಿಂದ ಪರೀಕ್ಷಾ ಕೇಂದ್ರಗಳವರೆಗೆ ಮತ್ತು ವಾಸಸ್ಥಳಕ್ಕೆ ಹಿಂದಿರುಗುವಾಗ ಪರೀಕ್ಷಾ ಪ್ರವೇಶ ಪತ್ರವನ್ನು ತೋರಿಸಿ ನಿಗಮದ ನಗರ ಹೊರವಲಯ, ಸಾಮಾನ್ಯ ಹಾಗೂ ವೇಗದೂತ ಬಸ್ಸುಗಳಲ್ಲಿ ಉಚಿತವಾಗಿ ಪ್ರಯಾಣಿಸಲು ಅವಕಾಶ ಕಲ್ಪಿಸಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

## 'ಕೃಷಿ ಉತ್ಪನ್ನ ಮಾರುಕಟ್ಟೆ ಕಾಯ್ದೆ ತಿದ್ದುಪಡಿ' ವಿಚಾರ ಸಂಕಿರಣ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯಲ್ಲಿ ದಿ. ಸುರೇಶ ಸೋಮಯ್ಯ ಶಾಬಾದಿಮಠ, ದಿ. ಚಂದನಮಲ್ ಗುಲಾಬಚಂದ ಬಾಗಮಾರ ಹಾಗೂ ದಿ. ಕುಂದನಮಲ್ ಧನರಾಜ್ ಶಹಾ ಇವರುಗಳ ಸ್ಮಾರಕ ದತ್ತಿ ಉಪನ್ಯಾಸದ ನಿಮಿತ್ತ 'ಕೃಷಿ ಉತ್ಪನ್ನ ಮಾರುಕಟ್ಟೆ ಕಾಯ್ದೆ ತಿದ್ದುಪಡಿ' ಕುರಿತು ವಿಚಾರ ಸಂಕಿರಣವನ್ನು ಮಾ.21ರ ಸಾಯಂಕಾಲ 4.30 ಗಂಟೆಗೆ ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಬನಪ್ಪ ಸಂಕಪ್ಪ ಸಂಕಣ್ಣವರ ಸಭಾಭವನದಲ್ಲಿ ಆಯೋಜಿಸಲಾಗಿದೆ.

ಈ ವಿಚಾರ ಸಂಕಿರಣದ ಅತಿಥಿ ಉಪನ್ಯಾಸಕರಾಗಿ ಗದಗ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಕಾರ್ಯದರ್ಶಿ ಕೆ.ಬಿ. ಮೇರುನಂದನ್ ಪಾಲ್ಗೊಳ್ಳಲಿದ್ದಾರೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಂಸ್ಥೆಯ ಅಧ್ಯಕ್ಷ ಈಶ್ವರಪ್ಪ ಸಿ.ಮುನವಳ್ಳಿ ವಹಿಸಲಿದ್ದಾರೆ. ಗದಗ ಜಿಲ್ಲೆಯ ಸಮಸ್ತ ಎ.ಪಿ.ಎಂ.ಸಿ. ಖರೀದಿ ವರ್ತಕರು ಹಾಗೂ ದಲಾಲ ವರ್ತಕರು ಈ ವಿಚಾರ ಸಂಕಿರಣದಲ್ಲಿ ಪಾಲ್ಗೊಂಡು ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಸಂಸ್ಥೆಯ ದತ್ತಿ ಉಪ ಸಮಿತಿ ಚೇರಮನ್ ಆನಂದ ಎಲ್.ಪೊತ್ನೀಸ, ಸಂಸ್ಥೆಯ ಎ.ಪಿ.ಎಂ.ಸಿ. ಉಪ ಸಮಿತಿ ಚೇರಮನ್ ಶರಣಪ್ಪ ಕೆ.ಕುರಡಗಿ, ಉಪಾಧ್ಯಕ್ಷ ತಾತನಗೌಡ ಎಸ್.ಪಾಟೀಲ, ಹರೀಶಕುಮಾರ ಎಸ್.ಶಹಾ, ಶರಣಬಸಪ್ಪ ಎಸ್.ಗುಡಿಮನಿ, ರಾಜಣ್ಣಾ ಬಿ.ಮಲ್ಲಾಡದ, ಸದಾಶಿವಯ್ಯ ಎಸ್.ಮದರಿಮಠ, ಕೋಶಾಧ್ಯಕ್ಷ ಅಶೋಕ ಕೆ.ಪಾಟೀಲ ಹಾಗೂ ದಿ. ಸುರೇಶ ಸೋಮಯ್ಯ ಶಾಬಾದಿಮಠ, ದಿ. ಚಂದನಮಲ್ ಗುಲಾಬಚಂದ ಬಾಗಮಾರ ಹಾಗೂ ದಿ. ಕುಂದನಮಲ್ ಧನರಾಜ್ ಶಹಾ ಇವರ ಹಿತೈಷಿಗಳು, ಸ್ನೇಹಿತರು, ಆತ್ಮೀಯರು ಬಂಧುಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಸಂಸ್ಥೆಯ ಗೌರವ ಕಾರ್ಯದರ್ಶಿ ಪ್ರಕಾಶ ಎಸ್.ಉಗಲಾಟದ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಗದಗ-ಹಾವೇರಿ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಕಾರ್ಯಕರ್ತರ ಸಭೆಯಲ್ಲಿ ಸಚಿವ ಎಚ್.ಕೆ. ಪಾಟೀಲ

# ಜನರ ವಿಶ್ವಾಸಕ್ಕೆ ಕಾಂಗ್ರೆಸ್ ದ್ರೋಹ ಬಗೆದಿಲ್ಲ

■ವಿಜಯಸಾಕ್ಷಿ ಸುದ್ದಿ, ಗದಗ

ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ಅವಧಿಯಲ್ಲಿ ದೇಶದ ರೈತರ 72 ಸಾವಿರ ಕೋಟಿ ರೂ ಸಾಲ ಮನ್ನಾ ಮಾಡಲಾಯಿತು. ಬಿಜೆಪಿ ಅವಧಿಯಲ್ಲಿ ಅದಾನಿ, ಅಂಬಾನಿಗಳ 6.50 ಲಕ್ಷ ಕೋಟಿ ಸಾಲ ಮನ್ನಾ ಮಾಡಲಾಗಿದೆ. ರೈತರಿಗೆ ಆದ ಅನ್ಯಾಯ ಇದೇ ಅಲ್ಲವೇ ಎಂದು ಕಾನೂನು, ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಪ್ರಶ್ನಿಸಿದರು.



ಬುಧವಾರ ನಗರದ ಕೆ.ಎಚ್. ಪಾಟೀಲ ಸಭಾಭವನದಲ್ಲಿ ಏರ್ಪಡಿಸಿದ್ದ ಗದಗ–ಹಾವೇರಿ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಕಾರ್ಯಕರ್ತರ ಸಭೆಯನ್ನು ಉದ್ಘಾಟಿಸಿ ಅವರು ಮಾತನಾಡಿ, ಬಿಜೆಪಿ ದೇಶದಲ್ಲಿ ಸಂವಿಧಾನದ ತಿರುಚುವ ಪ್ರಯತ್ನವನ್ನು ಸದ್ದಿಲ್ಲದೆ ನಡೆಸಿದೆ. ಚುನಾವಣಾ ಬಾಂಡ್ ಮೂಲಕ ಬಿಜೆಪಿ ಚುನಾವಣೆಗೆ ಹಣ ಸಂಗ್ರಹಿಸುತ್ತಿದೆ ಎಂದು ಆರೋಪಿಸಿದರು.

ಜನರ ವಿಶ್ವಾಸಕ್ಕೆ ಕಾಂಗ್ರೆಸ್ ಎಂದೂ ದ್ರೋಹ ಬಗೆದಿಲ್ಲ. ಬಡವರ, ದಲಿತರ, ಅಲ್ಪಸಂಖ್ಯಾತರ, ಹಿಂದುಳಿದ ವರ್ಗದವರ ಏಳ್ಗೆಗೆ ಕಾಂಗ್ರೆಸ್ ಸರ್ಕಾರ ಸದಾ ಬದ್ಧವಾಗಿದೆ. ಗ್ಯಾರಂಟಿ ಯೋಜನೆಗಳಿಂದ ಆರ್ಥಿಕ ಸಬಲತೆ ಸೃಷ್ಟಿಯಾಗಿದೆ. ಬಡವರ ಆರ್ಥಿಕ ಗುಣಮಟ್ಟ ಹೆಚ್ಚಾಗುತ್ತಿದೆ ಎಂದರು.

ಸಚಿವ ಶಿವಾನಂದ ಪಾಟೀಲ ಮಾತನಾಡಿ, ಬಿಜೆಪಿ ರಾಜ್ಯದಲ್ಲಿ ಎಂದಿಗೂ ಸ್ವಂತ ಅಧಿಕಾರಕ್ಕೆ ಬರಲಿಲ್ಲ. ದತ್ತು ಪುತ್ರರನ್ನು ಪಡೆದೇ ಅಧಿಕಾರಕ್ಕೆ ಬಂದಿದೆ. ಬಿಜೆಪಿ ಅಭ್ಯರ್ಥಿ ಬೊಮ್ಮಾಯಿ ಅವರು ಹಾವೇರಿ ಜಿಲ್ಲೆಯವರಾಗಿದ್ದರೂ ಕೂಡ ಅಧಿಕಾರದಲ್ಲಿದ್ದಾಗ ಜಿಲ್ಲೆಗೆ ನೀರು ಪೂರೈಸುವ ಯೋಜನೆ ತರಲಾಗಿಲ್ಲ. ಕಾಂಗ್ರೆಸ್ ಸರ್ಕಾರ ಮುಂಬರುವ ಒಂದು ವರ್ಷದಿಂದ ಹಾವೇರಿಗೆ ಸಂಪೂರ್ಣ ಕುಡಿಯುವ ನೀರು ಪೂರೈಕೆ ಮಾಡುತ್ತದೆ ಎಂದು ಭರವಸೆ ನೀಡುತ್ತೇನೆ. ಕಳೆದ 20 ವರ್ಷದಿಂದಲೂ ಬಿಜೆಪಿ ಅಭ್ಯರ್ಥಿಯನ್ನು ಆಯ್ಕೆ ಮಾಡಿ ಈ ಕ್ಷೇತ್ರ ಪಡೆದಿದ್ದಾದರೂ ಏನು ಎಂದು ಪ್ರಶ್ನಿಸಿದರು.

ಶಾಸಕ, ಕಾಂಗ್ರೆಸ್ ಜಿಲ್ಲಾಧ್ಯಕ್ಷ ಜಿ.ಎಸ್. ಪಾಟೀಲ ಮಾತನಾಡಿ, 2004ರಿಂದ ಹಾವೇರಿ ಲೋಕಸಭಾ ಕ್ಷೇತ್ರದಲ್ಲಿ ಗೆಲ್ಲಲು ಸಾಧ್ಯವಾಗಿಲ್ಲ. 2014ರಲ್ಲಿಯೂ ಕಾಂಗ್ರೆಸ್ ಶಾಸಕರು ಹೆಚ್ಚಿದ್ದರು. ಆದರೆ, ಲೋಕಸಭೆಯಲ್ಲಿ ಕಾಂಗ್ರೆಸ್ ಸೋತಿತು. ಹಾಗಾಗಿ, ಪಕ್ಷ ಆದೇಶಿಸಿದಂತೆ ಕ್ಷೇತ್ರದಲ್ಲಿ ಕೆಲಸಮಾಡಿ ಅಭ್ಯರ್ಥಿಯ ಗೆಲುವಿಗೆ ಶ್ರಮಿಸಬೇಕು. ಗ್ಯಾರಂಟಿ ಯೋಜನೆಗಳನ್ನು ಘೋಷಿಸುವುದಷ್ಟೇ ಅಲ್ಲ, ಆ ಯೋಜನೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನ ಮಾಡುವುದು ಸವಾಲಾಗಿರುತ್ತದೆ. ಗ್ಯಾರಂಟಿ ಯೋಜನೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನ ಮಾಡುವುದರಲ್ಲಿ ಕಾಂಗ್ರೆಸ್ ಸರ್ಕಾರ ಯಶಸ್ವಿಯಾಗಿದೆ ಎಂದರು.

ಡಿ.ಆರ್. ಪಾಟೀಲ ಮಾತನಾಡಿ, ಗದಗ ಜಿಲ್ಲೆಯಲ್ಲಿ ಈ ಬಾರಿ ಕಾಂಗ್ರೆಸ್ ಪಕ್ಷಕ್ಕೆ ಉತ್ತಮ ವಾತಾವರಣ ಇದೆ. ಈ ಉತ್ತಮ ಸ್ಥಿತಿಯನ್ನು ಮತಗಳಾಗಿ ಪರಿವರ್ತನೆ ಮಾಡಬೇಕಿದೆ. ಈ ಸಭೆಯಲ್ಲಿ ಸೇರಿರುವ ಜನರನ್ನು ನೋಡಿ ಗೆಲುವು ನಮ್ಮದೇ ಎಂಬ ವಿಶ್ವಾಸ ಮೂಡುತ್ತಿದೆ ಎಂದರು.

ಪಕ್ಷದ ಪ್ರಮುಖರಾದ ಡಿ.ಆರ್. ಪಾಟೀಲ, ಸುಜಾತಾ ದೊಡ್ಡಮನಿ, ರಾಮಣ್ಣ ಲಮಾಣಿ, ಹಾವೇರಿ–ಗದಗ ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ, ಜಿ.ಎಸ್. ಗಡ್ಡದೇವರಮಠ, ಎಲ್.ಡಿ. ಚಂದಾವರಿ, ಅಕ್ಬರ್‌ಸಾಬ ಬಬರ್ಚಿ,ಟಿ. ಈಶ್ವರ, ಮಿಥುನ ಪಾಟೀಲ, ಅಶೋಕ ಮಂದಾಲಿ, ಸಿದ್ದು ಪಾಟೀಲ, ವೀರಯ್ಯ ಸೋಮನಕಟ್ಟಿಮಠ ಇತರರು ಇದ್ದರು.

> ಸಂವಿಧಾನ ಕಾಪಾಡಿಕೊಳ್ಳುವ, ಮೀಸಲಾತಿ ಉಳಿಸಿಕೊಳ್ಳುವುದಕ್ಕಾಗಿ ನಾವು ಸಂವಿಧಾನ ರಕ್ಷಣೆ ಮಾಡಬೇಕಿದೆ. ಚುನಾವಣಾ ಪೂರ್ವದಲ್ಲಿ ಗ್ಯಾರಂಟಿ ಕಾರ್ಡ್‌ಗಳನ್ನು ಮನೆ ಮನೆಗೆ ತಲುಪಿಸಿದ್ದೆವು. ಅದೇ ರೀತಿ ಗ್ಯಾರಂಟಿ ಯೋಜನೆಗಳನ್ನೂ ಮನೆ ಮನೆಗೆ ತಲುಪಿಸಿದ್ದೇವೆ. ಕಾಂಗ್ರೆಸ್ ಪಕ್ಷದ ಮೇಲೆ ಜನರಿಗೆ ಇರುವ ವಿಶ್ವಾಸ ಬಹುದೊಡ್ಡದು. ಗ್ಯಾರಂಟಿ ಯೋಜನೆಗಳು ಮಾನವ ಹಕ್ಕುಗಳಾಗಬೇಕು ಎಂಬುದು ಕಾಂಗ್ರೆಸ್ ಉದ್ದೇಶವಾಗಿದೆ.
>
> – **ಎಚ್.ಕೆ ಪಾಟೀಲ,** ಸಚಿವರು.

ವಿ.ಪ ಸದಸ್ಯ ಸಲೀಂ ಅಹಮ್ಮದ ಮಾತನಾಡಿ, ಸಮಾಜದ ಎಲ್ಲ ವರ್ಗಗಳ ಹಿತಾಸಕ್ತಿ ಕಾಯುವ ಪಕ್ಷ ಕಾಂಗ್ರೆಸ್ ಪಕ್ಷವಾಗಿದೆ. ಬಿಜೆಪಿ. ಸುಳ್ಳು ಹೇಳುವ ಪಕ್ಷವಾಗಿದೆ. ಚುನಾವಣಾ ಬಾಂಡ್‌ಗಳ ಮೂಲಕ ಬಿಜೆಪಿ ಭ್ರಷ್ಟಾಚಾರ ಪಸರಿಸುತ್ತಿದೆ ಎಂದು ಆರೋಪಿಸಿದರಲ್ಲದೆ, ಬಜೆಟ್‌ನಲ್ಲಿ ಗ್ಯಾರಂಟಿಗೆ 58 ಸಾವಿರ ಕೋಟಿ ರೂ ಮೀಸಲಿಟ್ಟಿದ್ದೇವೆ. ದೇಶದ ಐಕ್ಯತೆಗೆ ಕಾಂಗ್ರೆಸ್ ಪಕ್ಷ ತ್ಯಾಗ, ಬಲಿದಾನ ನೀಡಿದೆ. ಅತ್ಯಂತ ಹೆಚ್ಚಿನ ಮತಗಳಿಂದ ಕಾಂಗ್ರೆಸ್ ಅಭ್ಯರ್ಥಿಯನ್ನು ಗೆಲ್ಲಿಸಬೇಕು ಎಂದರು.

### ಎಸ್‌ಎಸ್‌ಎಲ್‌ಸಿ ಪರೀಕ್ಷಾ ಕೇಂದ್ರಗಳ ಮುಖ್ಯ ಅಧೀಕ್ಷಕರ, ಮಾರ್ಗಾಧಿಕಾರಿಗಳ ಸಭೆ

# ಪರೀಕ್ಷಾ ತಯಾರಿ ಮಕ್ಕಳನ್ನು ಪ್ರೇರೇಪಿಸುವಂತಿರಲಿ

■ವಿಜಯಸಾಕ್ಷಿ ಸುದ್ದಿ, ಗದಗ

2023–24ನೇ ಸಾಲಿನ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಪರೀಕ್ಷೆಯನ್ನು ಯಾವುದೇ ಭಯವಿಲ್ಲದೇ ಮುಕ್ತ ಮನಸ್ಸಿನಿಂದ ಬರೆಯಲು ಪರೀಕ್ಷಾ ಕೇಂದ್ರಗಳಲ್ಲಿ ಮೂಲಭೂತ ಅವಶ್ಯಕತೆಗಳಾದ ಆಸನದ ವ್ಯವಸ್ಥೆ, ಶೌಚಾಲಯದ ವ್ಯವಸ್ಥೆ, ಶುದ್ಧ ಕುಡಿಯುವ ನೀರಿನ ವ್ಯವಸ್ಥೆ, ಸಿ.ಸಿ ಕ್ಯಾಮರಾ ಹಾಗೂ ಇನ್ನಿತರ ಅಗತ್ಯ ತಯಾರಿ ಮಾಡಿಕೊಂಡು ಭಯಮುಕ್ತ ವಾತಾವರಣದಲ್ಲಿ ಪರೀಕ್ಷೆ ಬರೆಯುವಂತೆ ನೋಡಿಕೊಳ್ಳಬೇಕೆಂದು ಬೆಳಗಾವಿಯ ಸರಕಾರಿ ಶಿಕ್ಷಕರ ಶಿಕ್ಷಣ ಮಹಾವಿದ್ಯಾಲಯದ ಪ್ರವಾಚಕರು ಹಾಗೂ ಗದಗ ಜಿಲ್ಲಾ ಎಸ್‌ಎಸ್‌ಎಲ್‌ಸಿ ನೋಡಲ್ ಅಧಿಕಾರಿಗಳೂ ಆದ ಬಿ.ಎಸ್. ಮಾಯಾಚಾರಿ ಮಾರ್ಗದರ್ಶನ ಮಾಡಿದರು.



ಅವರು ಬುಧವಾರ ಗದಗ ಶಹರ ವಲಯ ಹಾಗೂ ಗ್ರಾಮೀಣ ವಲಯದ ಎಲ್ಲಾ ಪರೀಕ್ಷಾ ಕೇಂದ್ರಗಳ ಮುಖ್ಯ ಅಧೀಕ್ಷಕರು ಹಾಗೂ ಪರೀಕ್ಷಾ ಕೇಂದ್ರಗಳ ಮಾರ್ಗಾಧಿಕಾರಿಗಳ ಸಭೆಯಲ್ಲಿ ಭಾಗವಹಿಸಿ ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿಯು ಸೂಚಿಸಿದ ನಿಯಮಗಳಂತೆ ಮುಖ್ಯ ಅಧೀಕ್ಷಕರು ಮತ್ತು ಅಭಿರಕ್ಷಕರು ತಮ್ಮ ಪಾಲಿನ ಕರ್ತವ್ಯಗಳನ್ನು ಜವಾಬ್ದಾರಿಯಿಂದ ನಿರ್ವಹಿಸಬೇಕು. ಯಾವುದೇ ಅಹಿತಕರ ಘಟನೆಗಳಿಗೆ ಅವಕಾಶ ನೀಡಬಾರದು ಮತ್ತು ಶಿಸ್ತಿನಿಂದ ಯಶಸ್ವಿಯಾಗಿ ಪರೀಕ್ಷೆ ನಡೆಸಲು ಮಾರ್ಗದರ್ಶನ ಮಾಡಿದರು.

ಈ ಸಂದರ್ಭದಲ್ಲಿ ಗದಗ ಶಹರ ಹಾಗೂ ಗ್ರಾಮೀಣ ವಲಯಗಳ ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಆರ್.ಎಸ್. ಬುರಡಿ, ವಿ.ವಿ. ನಡುವಿನಮನಿ ಉಪಸ್ಥಿತರಿದ್ದು, ಅಗತ್ಯ ಮಾರ್ಗದರ್ಶನ ಹಾಗೂ ಸೂಚನೆಗಳನ್ನು ನೀಡಿದರು. ಸಭೆಯಲ್ಲಿ ಜಿಲ್ಲಾ ಉಪಯೋಜನಾ ಸಮನ್ವಯಾಧಿಕಾರಿ ಎಂ.ಎಚ್. ಕಂಬಳಿ, ತಾ.ಪಂ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಮಾಣಿಕೇಶ್ವರ, ತಹಸೀಲ್ದಾರ ಕಾರ್ಯಾಲಯದ ಗ್ರೇಡ್–2 ತಹಸೀಲ್ದಾರ ಬಾಲೇಹೊಸೂರ, ಪೊಲೀಸ್ ಎಎಸ್‌ಐ ವಿ.ವಿ. ಪತ್ತಾರ, ಎರಡೂ ವಲಯಗಳ ಕ್ಷೇತ್ರ ಸಮನ್ವಯಾಧಿಕಾರಿಗಳು ಹಾಗೂ ಎಸ್‌ಎಸ್‌ಎಲ್‌ಸಿ ತಾಲೂಕಾ ನೋಡಲ್ ಅಧಿಕಾರಿಗಳು ಉಪಸ್ಥಿತರಿದ್ದರು.

ಶಹರ ವಲಯದ ಕೆಲವು ಪರೀಕ್ಷಾ ಕೇಂದ್ರಗಳಿಗೆ ಭೇಟಿ ನೀಡಿ, ಪರೀಕ್ಷಾ ತಯಾರಿ ಕುರಿತು ಪರಿಶೀಲನೆ ನಡೆಸಿದರು. ನಂತರ ಕೊಠಡಿ ಮೇಲ್ವಿಚಾರಕರ ತರಬೇತಿ ಕಾರ್ಯಾಗಾರದಲ್ಲಿ ಪಾಲ್ಗೊಂಡು ಮಾತನಾಡಿ, ಕೊಠಡಿ ಮೇಲ್ವಿಚಾರಕರು ತಮಗೆ ವಹಿಸಿದ ಬ್ಲಾಕ್‌ನಲ್ಲಿ ಯಾವುದೇ ಎಲೆಕ್ಟ್ರಾನಿಕ್ಸ್ ಉಪಕರಣಗಳಿಗೆ ಅವಕಾಶ ನೀಡದೇ ವಿದ್ಯಾರ್ಥಿಗಳನ್ನು ತಪಾಸಣೆ ಮಾಡಿ ಪರೀಕ್ಷೆ ಬರೆಯಲು ಬಿಡಬೇಕು. ಪರೀಕ್ಷಾ ಬ್ಲಾಕ್‌ನಲ್ಲಿ ಕುಳಿತುಕೊಳ್ಳದೇ ಪರೀಕ್ಷಾರ್ಥಿಗಳ ಕಡೆಗೆ ಗಮನ ಹರಿಸುತ್ತ ಎಲ್ಲ ದಾಖಲೆಗಳನ್ನು ನಿರ್ವಹಿಸುತ್ತ ಉತ್ತಮ ರೀತಿಯಲ್ಲಿ ಪರೀಕ್ಷಾ ಕಾರ್ಯವನ್ನು ಮಾಡಬೇಕೆಂದು ಸೂಚಿಸಿದರು.

## ದಾಖಲೆಯಿಲ್ಲದೆ ಸಾಗಿಸುತ್ತಿದ್ದ ನಗದು ವಶಕ್ಕೆ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಲೋಕಸಭೆ ಚುನಾವಣೆ ಹಿನ್ನೆಲೆಯಲ್ಲಿ ಹುಬ್ಬಳ್ಳಿ ರಸ್ತೆಯ ಗೋವನಾಳ ಬಳಿ ತೆರೆಯಲಾದ ಚೆಕ್‌ಪೋಸ್ಟ್‌ನಲ್ಲಿ ಸೂಕ್ತ ದಾಖಲೆಯಿಲ್ಲದೇ ಸಾಗಿಸುತ್ತಿದ್ದ 1.50ಲಕ್ಷ ರೂ ನಗದನ್ನು ಬುಧವಾರ ವಶಪಡಿಸಿಕೊಳ್ಳಲಾಗಿದೆ.

ಕ್ರೇಟಾ ಕಾರ್‌ನಲ್ಲಿ ಸೂಕ್ತ ದಾಖಲಾತಿಗಳಿಲ್ಲದೇ ಸಾಗಿಸುತ್ತಿದ್ದ 1.50 ಲಕ್ಷ ರೂ ನಗದನ್ನು ಅಲ್ತಾಪ ಅಬ್ದುಲಕರಿಂ ಅಕ್ಕಿಹೊಳೆ ಅವರಿಂದ ವಶಪಡಿಸಿಕೊಳ್ಳಲಾಗಿದೆ. ಈ ವೇಳೆ ತಹಸೀಲ್ದಾರ ವಾಸುದೇವ ಎಂ.ಸ್ವಾಮಿ, ಫ್ಲಾಯಿಂಗ್ ಸ್ಕ್ವಾಡ್ ಮಹೇಶ ಹಡಪದ, ಪಿಎಸ್‌ಐ ಈರಣ್ಣ ರಿತ್ತಿ, ಭೀಮಸೇನ ಉಗ್ರದ ಸೇರಿ ಸಿಬ್ಬಂದಿಗಳಿದ್ದರು.

### ಹೋಳಿ ಹುಣ್ಣಿಮೆಯ ಪ್ರಯುಕ್ತ ಕರೆದಿದ್ದ ಶಾಂತಿ ಸಭೆಯಲ್ಲಿ ಪಿಎಸ್‌ಐ ಈರಣ್ಣ ರಿತ್ತಿ

# ಹಬ್ಬಗಳು ನಾಡಿನ ಸಂಪ್ರದಾಯದ ಪ್ರತೀಕ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಲಕ್ಷ್ಮೇಶ್ವರ ಸೇರಿ ತಾಲೂಕಿನಾದ್ಯಂತ ಮಾರ್ಚ್ ಕೊನೆಯ ವಾರದಲ್ಲಿ ನಡೆಯುವ ಹೋಳಿ ಹಬ್ಬವನ್ನು ಸಂಪ್ರದಾಯಬದ್ಧವಾಗಿ, ಯಾವುದೇ ಅಹಿತಕರ ಘಟನೆಗೆ ಆಸ್ಪದ ನೀಡದಂತೆ ಶಾಂತಿಯುತವಾಗಿ ಆಚರಿಸಬೇಕೆಂದು ಪಿಎಸ್‌ಐ ಈರಣ್ಣ ರಿತ್ತಿ ಸೂಚಿಸಿದರು.

ಅವರು ಬುಧವಾರ ಪಟ್ಟಣದ ಪೊಲೀಸ್ ಠಾಣೆಯಲ್ಲಿ ಹೋಳಿ ಹಬ್ಬದ ಪ್ರಯುಕ್ತ ಕರೆಯಲಾಗಿದ್ದ ವಿವಿಧ ಸಮಾಜಗಳ ಮುಖಂಡರುಗಳನ್ನೊಳಗೊಂಡ ಶಾಂತಿ ಸಭೆಯಲ್ಲಿ ಮಾತನಾಡುತ್ತಿದ್ದರು.



ಹಬ್ಬಗಳು ನಾಡಿನ ಸಂಪ್ರದಾಯದ ಪ್ರತೀಕ ಮತ್ತು ಪರಸ್ಪರರಲ್ಲಿ ಸ್ನೇಹ, ಸೌಹಾರ್ದತೆ ಬೆಸೆಯುವ ಕೊಂಡಿಯಾಗಿವೆ. ಹಿಂದೂ–ಮುಸ್ಲಿಂ ಭಾವೈಕ್ಯತೆಗೆ ಹೆಸರಾದ ಪಟ್ಟಣದಲ್ಲಿ ಹೋಳಿ ಹಬ್ಬವನ್ನು ಸಹೋದರತ್ವ ಭಾವನೆಯಿಂದ ಶಾಂತಿಯುತ ಮತ್ತು ಅರ್ಥಪೂರ್ಣವಾಗಿ ಆಚರಿಸಿ. ಹಬ್ಬದ ಸಂದರ್ಭದಲ್ಲಿ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವ ರಾಸಾಯನಿಕಯುಕ್ತ ಬಣ್ಣ ಬಳಸಬಾರದು. ಮುಂಜಾಗೃತಾ ಕ್ರಮವಾಗಿ ಸೂಕ್ತ ಬಂದೋಬಸ್ತ್ ಕ್ರಮಗಳನ್ನು ಏರ್ಪಡಿಸಿದ್ದು, ಅಹಿತಕರ ಘಟನೆಗೆ ಕಾರಣರಾದವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

ಹಿರಿಯರಾದ ಪೂರ್ಣಾಜಿ ಖರಾಟೆ ಮಾತನಾಡಿ, ಸ್ನೇಹ ಸೌಹಾರ್ದತೆಯ ಸಂಕೇತವಾದ ಹೋಳಿ ಹಬ್ಬವನ್ನು ದ್ವೇಷ ಮತ್ತು ಕೋಮು ಭಾವನೆ ಮರೆತು ಎಲ್ಲರೂ ಸೇರಿ ಆಚರಿಸೋಣ. ನಮ್ಮ ಪೂರ್ವಜರ ಕಾಲದಿಂದಲೂ ಆಚರಣೆಯಲ್ಲಿರುವ ಎಲ್ಲ ಹಬ್ಬಗಳಿಗೂ ಅರ್ಥಪೂರ್ಣವಾದ ಕಾರಣಗಳಿದ್ದು, ಅವುಗಳನ್ನು ಮುಂದಿನ ಸಮಾಜಕ್ಕೆ ಕೊಂಡೊಯ್ಯುವ ಜವಾಬ್ದಾರಿ ಎಲ್ಲರದ್ದಾಗಿದೆ. ಈ ನಿಟ್ಟಿನಲ್ಲಿ ಎಲ್ಲ ಸಮಾಜಗಳ ಮುಖಂಡರು ಮತ್ತು ಸಂಘಟನೆಗಳ ಪ್ರಮುಖರು ಪಾಲ್ಗೊಳ್ಳುವ ಮೂಲಕ ಪರಸ್ಪರ ಸ್ನೇಹಪೂರ್ವಕ ರಂಗಿನಾಟದಲ್ಲಿ ಬೆರೆಯೋಣ ಎಂದು ಹೇಳಿದರು.

ಗಂಗಾಧರ ಮೆಣಸಿನಕಾಯಿ, ಶಿವಣ್ಣ ಕಟಗಿ, ನಜೀರ ಅಹ್ಮದ ಗದಗ ಮಾತನಾಡಿ, ಹೋಳಿ ಹಬ್ಬದ ಆಚರಣೆಗೆ ವಿಶೇಷವಾದ ಅರ್ಥವಿದ್ದು, ಹಬ್ಬ ಆಚರಣೆ ದಾರಿ ತಪ್ಪದಿರಲಿ. ಬರಗಾಲ, ನೀರಿನ ಬವಣೆಯಿದ್ದು ರಾಸಾಯನಿಕ ಮಿಶ್ರಿತ ಬಣ್ಣ ಆಡದಂತೆ ತಿಳಿಸೋಣ. ಪರೀಕ್ಷೆ ನಡೆಯುವುದರಿಂದ ಶಾಲಾ–ಕಾಲೇಜು ವಿದ್ಯಾರ್ಥಿಗಳಿಗೆ, ಸಾರ್ವಜನಿಕರಿಗೆ ತೊಂದರೆ–ಯಾಗದಂತೆ ಹಬ್ಬ ಆಚರಿಸೋಣ ಎಂದರು.

ಈ ವೇಳೆ ಸುಲೇಮಾನಸಾಬ ಕಣಕೆ, ಮಂಜುನಾಥ ಹೊಗೆಸೊಪ್ಪಿನ, ಮಹೇಶ ಕಲಘಟಗಿ, ನಾಗರಾಜ ಹಾವಳಕೇರಿ, ಚಂದ್ರು ಹಂಪಣ್ಣನವರ, ಇಸ್ಮಾಯಿಲ್ ಆಡೂರ, ಸದಾನಂದ ನಂದೆಣ್ಣನವರ, ಮಂಜುನಾಥ ನರೇಗಲ್ ಸೇರಿ ವಿವಿಧ ಸಮಾಜದ ಮುಖಂಡರು ಇದ್ದರು. ಸಿಬ್ಬಂದಿ ಮಾಲತಿ ಶೀಗಿಹಳ್ಳಿ, ಮಾರುತಿ ಲಮಾಣಿ ನಿರ್ವಹಿಸಿದರು.

> ಮಾ.25ರಂದು ಗೊಜನೂರ, ಅಡರಕಟ್ಟಿ ಸೇರಿ ಕೆಲವು ಗ್ರಾಮಗಳಲ್ಲಿ, ಮಾ. 26ರಂದು ತಾಲೂಕಿನ ಎಲ್ಲ ಗ್ರಾಮಗಳಲ್ಲಿ ಮತ್ತು ಮಾ. 29ರಂದು ಲಕ್ಷ್ಮೇಶ್ವರ ಮತ್ತು ಶಿಗ್ಲಿಯಲ್ಲಿ ರಂಗಿನೋಕಳಿ ಹಬ್ಬ ಜರುಗಲಿದೆ.

# ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ಗದಗ, ಮುಂಡರಗಿ, ಶಿರಹಟ್ಟಿ, ಲಕ್ಷ್ಮೇಶ್ವರ, ನರಗುಂದ ಮತ್ತು ಗಜೇಂದ್ರಗಡ ತಾಲೂಕುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಲ್ಪಸಂಖ್ಯಾತರ ಮೌಲಾನಾ ಆಜಾದ್ ಮಾದರಿ ಶಾಲೆಗಳಿಗೆ 2024-25ನೇ ಸಾಲಿಗೆ 6ನೇ ತರಗತಿ ಒಟ್ಟು 360 ವಿದ್ಯಾರ್ಥಿಗಳ ದಾಖಲಾತಿಗಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಇದರಲ್ಲಿ 75% ರಷ್ಟು ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಹಾಗೂ 25% ರಷ್ಟು ಇತರೇ ವರ್ಗದವರಿಗೆ ವಿತರಿಸಲಾಗುವುದು.

ಅಂಗವಿಕಲ ವಿದ್ಯಾರ್ಥಿಗಳು, ವಿಶೇಷ ಗುಂಪಿಗೆ ಸೇರಿದ ಅಂದರೆ ಅನಾಥ ಮಕ್ಕಳು, ವಿಧವೆಯರ ಮಕ್ಕಳು, ಪೌರ ಕಾರ್ಮಿಕರ ಮಕ್ಕಳು ಇತ್ಯಾದಿಗಳಿಗೆ 3% ರಷ್ಟು ಆಸನಗಳನ್ನು ಕಾಯ್ದಿರಿಸಲಾಗಿದೆ.

6ನೇ ತರಗತಿಗೆ ದಾಖಲಾತಿ ಬಯಸುವ ವಿದ್ಯಾರ್ಥಿಗಳು 5 ನೇ ತರಗತಿಯಲ್ಲಿ ಉತ್ತೀರ್ಣರಾಗಿರಬೇಕು ಹಾಗೂ ಕುಟುಂಬದ ವಾರ್ಷಿಕ ಆದಾಯ ರೂ. 2.50 ಲಕ್ಷ ಮೀರಿರಬಾರದು, ಅರ್ಜಿಗಳನ್ನು ಆನ್‌ಲೈನ್ https://dom.karnataka.gov.in ಮೂಲಕ ಎಪ್ರಿಲ್ 14 ರೊಳಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಗದಗ ಹಾಗೂ ಆಯಾ ತಾಲೂಕಿನ ಮೌಲಾನಾ ಆಜಾದ ಮಾದರಿ ಶಾಲೆಯ ಮುಖ್ಯೋಪಾಧ್ಯಾಯರನ್ನು ಸಂಪರ್ಕಿಸಬಹುದಾಗಿದೆ.

ಈ ಕೆಳಕಂಡ ಅಲ್ಪಸಂಖ್ಯಾತರ ಮಾಹಿತಿ ಕೇಂದ್ರಗಳಲ್ಲಿ ಹೆಚ್ಚಿನ ಮಾಹಿತಿಯನ್ನು ಪಡೆಯಬಹುದಾಗಿದೆ.

08371-262911 ತಾಲೂಕ ಪಂಚಾಯತ್ ಆವರಣ, ಮುಂಡರಗಿ ; 08372-297494 ಮೌಲಾನಾ ಆಜಾದ್ ಭವನ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಗದಗ ; 08381-267258 ತಾಲೂಕ ಪಂಚಾಯತ್ ಆವರಣ, ರೋಣ. ; 08377-245411 ತಹಸೀಲ್ದಾರ ಕಾರ್ಯಾಲಯ ರೂ.ನಂ:20, ನರಗುಂದ.; 08487-242810 ತಾಲೂಕ ಪಂಚಾಯತ್ ಹತ್ತಿರ, ಶಿರಹಟ್ಟಿ. ಈ ಮಾಹಿತಿ ಕೇಂದ್ರಗಳನ್ನು ಸಂಪರ್ಕಿಸಬಹುದಾಗಿದೆ.

### ಮಕ್ಕಳ ಸಾಹಿತ್ಯ ಸಮ್ಮೇಳನದ ಉದ್ಘಾಟನಾ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

# ಮಕ್ಕಳು ದೇಶದ ಅಮೂಲ್ಯ ಸಂಪತ್ತು

■ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು

ಮಕ್ಕಳ ಮನಸ್ಸು ಪರಿಶುದ್ಧವಾದುದು ಮತ್ತು ಪವಿತ್ರವಾದುದು. ಬೆಳೆಯುವ ಮಕ್ಕಳಿಗೆ ಯೋಗ್ಯ ಸಂಸ್ಕಾರ ಮತ್ತು ಉತ್ತಮ ಮಾರ್ಗದರ್ಶನ ಕೊಟ್ಟರೆ ಆದರ್ಶ ವ್ಯಕ್ತಿಗಳಾಗಿ ಬಾಳಲು ಸಾಧ್ಯ. ಮಕ್ಕಳು ದೇಶದ ಅಮೂಲ್ಯ ಸಂಪತ್ತು ಎಂದು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ ಹಾಗೂ ಕ್ಷೇತ್ರನಾಥ ಶ್ರೀ ವೀರಭದ್ರಸ್ವಾಮಿ ಮಹಾರಥೋತ್ಸವದ ಅಂಗವಾಗಿ ಜರುಗಿದ ಎನ್.ಆರ್. ಪುರ ತಾಲೂಕ ಪ್ರಥಮ ಮಕ್ಕಳ ಸಾಹಿತ್ಯ ಸಮ್ಮೇಳನದ ಉದ್ಘಾಟನಾ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಗಿಡವಾಗಿ ಬಗ್ಗದ್ದು ಮರವಾಗಿ ಬಗ್ಗೀತೇ ಎಂಬ ಗಾದೆ ಮಾತೊಂದಿದೆ. ಕಿರಿ ವಯಸ್ಸಿನಲ್ಲಿ ಕೊಟ್ಟ ಸಂಸ್ಕಾರ ಜೀವನದ ಕೊನೆವರೆಗೆ ಇರುತ್ತವೆ. ಅವರ ಉಜ್ವಲ ಭವಿಷ್ಯಕ್ಕೆ ಕಾರಣವಾಗುತ್ತವೆ. ಉತ್ತಮ ಶಿಕ್ಷಣದೊಂದಿಗೆ ಮಕ್ಕಳು ದೇಶದ ಭಾವೀ ಪ್ರಜೆಗಳಾಗಿ ಬಾಳಲಿ. ಶ್ರೀ ಪೀಠದ ಜಾತ್ರಾ ಮಹೋತ್ಸವದ ಸುಸಂದರ್ಭದಲ್ಲಿ ಈ ಸಮ್ಮೇಳನ ಜರುಗುತ್ತಿರುವುದು ಅತೀವ ಸಂತೋಷವನ್ನು ಉಂಟುಮಾಡಿದೆ. ಶ್ರೀ ಜಗದ್ಗುರು ರಂಭಾಪುರಿ ಪೀಠ ಮಕ್ಕಳ ಪ್ರತಿಭೆಯನ್ನು ಗುರುತಿಸಿ ಪ್ರೋತ್ಸಾಹಿಸುವ ಕೆಲಸವನ್ನು ನಿರಂತರವಾಗಿ ಮಾಡಿಕೊಂಡು ಬಂದಿದೆ. ಇಂದಿನ ಮಕ್ಕಳ ಸಮ್ಮೇಳನದ ಅಧ್ಯಕ್ಷೆ ಬಿ.ಎ. ವರ್ಷಿಣಿ, ಸಹ ಅಧ್ಯಕ್ಷ ಮನೋಜ್ ಎಫ್.ಎ., ರಕ್ಷಿತ ಹಾಗೂ ಕಲಾ ಇವರಲ್ಲಿರುವ ಪ್ರತಿಭೆಯನ್ನು ಕಂಡು ಮನಸ್ಸಿಗೆ ಸಂತೋಷವಾಗಿದೆ. ಈ ನಾಲ್ಕೂ ಮಕ್ಕಳಿಗೆ ಈ ವರ್ಷದ ಅಬ್ಬಿಗೇರಿ ದಸರಾ ಮಹೋತ್ಸವದಲ್ಲಿ ಖಂಡಿತವಾಗಿ ಮಾತನಾಡಲು ಅವಕಾಶ ಕಲ್ಪಿಸಿಕೊಡಲಾಗುವುದು. ಅಲ್ಲದೇ ಈ ನಾಲ್ಕೂ ಮಕ್ಕಳ ಮುಂದಿನ ವಿದ್ಯಾಭ್ಯಾಸಕ್ಕಾಗಿ ಶ್ರೀ ಪೀಠದಿಂದ ಆರ್ಥಿಕ ಸಹಾಯವನ್ನು ಕಲ್ಪಿಸಿಕೊಡುತ್ತೇವೆ ಎಂದರು.



ಜನ್ಮ ಕೊಟ್ಟ ತಂದೆ-ತಾಯಿಗಳು ಮಕ್ಕಳಿಗಾಗಿ ಆಸ್ತಿ ಮಾಡುವುದರ ಬದಲಾಗಿ ಹುಟ್ಟಿದ ಮಕ್ಕಳಿಗೆ ಯೋಗ್ಯ ಶಿಕ್ಷಣ, ಸಂಸ್ಕಾರ ಕೊಡುವುದರ ಮೂಲಕ ಬೆಳೆಸಬೇಕು. ಐದು ವರುಷದವರೆಗೆ ಮಕ್ಕಳನ್ನು ಹೂವಿನಂತೆ ಜೋಪಾನ ಮಾಡಬೇಕು. ಹತ್ತು ತುಂಬುವ ಸಂದರ್ಭದಲ್ಲಿ ಮಕ್ಕಳು ತಪ್ಪು ಮಾಡಿದರೆ ಒಂದು ಪೆಟ್ಟು ಕೊಟ್ಟು ತಿದ್ದುವ ಕೆಲಸ ಮಾಡಬೇಕು. ಹದಿನಾರು ಮೀರಿದ ಸಂದರ್ಭದಲ್ಲಿ ಮಕ್ಕಳನ್ನು ಸಹೋದರರಂತೆ ಕಂಡು ಪ್ರೋತ್ಸಾಹಿಸಬೇಕು. ಯಾವ ಯಾವ ಮಕ್ಕಳಲ್ಲಿ ಎಂಥ ಅದ್ಭುತ ಶಕ್ತಿಯಿದೆಯೋ ಅದನ್ನು ಗುರುತಿಸಿ ಸ್ಫೂರ್ತಿ ತುಂಬುವ ಕಾರ್ಯ ಮಾಡಬೇಕು ಎಂದು ರಂಭಾಪುರಿ ಶ್ರೀಗಳು ತಿಳಿಸಿದರು.

ಸಮಾರಂಭವನ್ನು ಕರ್ನಾಟಕ ರಾಜ್ಯ ಮಕ್ಕಳ ಸಾಹಿತ್ಯ ಪರಿಷತ್ತು ಬೆಂಗಳೂರು ಇದರ ರಾಜ್ಯಾಧ್ಯಕ್ಷ ಸಿ.ಎನ್. ಅಶೋಕ ಉದ್ಘಾಟಿಸಿ ಮಾತನಾಡಿ, ಜಾತಿ-ಮತ-ಪಂಥಗಳ ಬೇಧ ಅರಿಯದೇ ಜನಿಸುವ ಮಗು ಮುಂದಿನ ದಿನಗಳಲ್ಲಿ ವಿಶ್ವ ಮಾನವನಾಗಿ ಬೆಳೆಯಬೇಕೆಂಬುದು ನಮ್ಮ ಉದ್ದೇಶವಾಗಿದೆ. ಮಕ್ಕಳಲ್ಲಿ ಸಾಹಿತ್ಯದ ಅಭಿರುಚಿ ಬೆಳೆಯಬೇಕು. ಉತ್ತಮ ಸಂಸ್ಕಾರದೊಂದಿಗೆ ಉನ್ನತ ಶಿಕ್ಷಣ ಪಡೆದ ಮಕ್ಕಳು ದೇಶವನ್ನು ಕಟ್ಟುವವರಾಗಬೇಕು ಎಂದರು. ಮಕ್ಕಳ ಸಾಹಿತ್ಯ ಪರಿಷತ್ತು ಚಿಕ್ಕಮಗಳೂರು ಕಾರ್ಯದರ್ಶಿ ಹೂ.ವೀ. ಸಿದ್ಧೇಶ ಪ್ರಾಸ್ತಾವಿಕ ಮಾತನಾಡಿದರು.

ಸಮ್ಮೇಳನದ ಅಧ್ಯಕ್ಷೆ ಬಾಳೆಹೊನ್ನೂರು ನಿರ್ಮಲ ಕಾನ್ವೆಂಟಿನ ಬಿ.ಎ. ವರ್ಷಿಣಿ ಅಧ್ಯಕ್ಷೀಯ ಭಾಷಣ ಮಾಡಿದರು. ಸಹ ಅಧ್ಯಕ್ಷ ಶ್ರೀ ರಂಭಾಪುರಿ ಪೀಠದ ಶ್ರೀ ಜ.ರುದ್ರಮುನೀಶ್ವರ ವಸತಿ ಪ್ರೌಢಶಾಲೆಯ ಮನೋಜ್ ಎಫ್.ಎ ಉಪಸ್ಥಿತರಿದ್ದರು. ಸುಳ್ಳ ಪಂಚಗೃಹ ಹಿರೇಮಠದ ಶಿವಸಿದ್ಧರಾಮೇಶ್ವರ ಶಿವಾಚಾರ್ಯ ಸ್ವಾಮಿಗಳು ನೇತೃತ್ವ ವಹಿಸಿದ್ದರು. ಬೇರುಗಂಡಿ ಬೃಹನ್ಮಠದ ರೇಣುಕ ಮಹಂತ ಶಿವಾಚಾರ್ಯ ಸ್ವಾಮಿಗಳು ಉಪದೇಶಾಮೃತ ನೀಡಿದರು.

ಮುಖ್ಯ ಅತಿಥಿಗಳಾಗಿ ಚಿಕ್ಕಮಗಳೂರು ಕ.ರಾ.ಮಕ್ಕಳ ಸಾ.ಪ. ಅಧ್ಯಕ್ಷ ಮಲ್ಲಿಗೆ ಸುಧೀರ್, ಹಾಸನ ಅಧ್ಯಕ್ಷ ಅಧ್ಯಕ್ಷ ಗಂಗಾಧರ್, ಬಿ.ಕಣಬೂರು ಗ್ರಾ.ಪಂ ಅಧ್ಯಕ್ಷ ಸದಾಶಿವ ಆಚಾರಿ, ಕೆ.ಟಿ. ವೆಂಕಟೇಶ್ ಪಾಲ್ಗೊಂಡಿದ್ದರು. ನವದೆಹಲಿಯ ಪ್ರಥಮ ರಾಷ್ಟ್ರೀಯ ಹೊರನಾಡು ಮಕ್ಕಳ ಸಮ್ಮೇಳನದ ಸಹ-ಅಧ್ಯಕ್ಷೆ ರಕ್ಷಿತ ಹಾಗೂ ಕಲಾ ಇವರಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ಗುರುರಕ್ಷೆ ನೀಡಿ ಆಶೀರ್ವದಿಸಿದರು. ಚಿಕ್ಕಮಗಳೂರು ಮಾಧ್ಯಮ ಸಂಸ್ಕೃತಿ ಪ್ರತಿಷ್ಠಾನದ ಅಧ್ಯಕ್ಷ ಚಿ.ಸ. ಪ್ರಭುಲಿಂಗಶಾಸ್ತ್ರಿ ಸ್ವಾಗತಿಸಿದರು. ವಿಠಲಾಪುರದ ಗಂಗಾಧರಸ್ವಾಮಿ ಹಿರೇಮಠ ಭಕ್ತಿ ಗೀತೆ ಹಾಡಿದರು. ಶಿಕ್ಷಕ ವೀರೇಶ ಕುಲಕರ್ಣಿ ನಿರೂಪಿಸಿದರು.

### ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯಲ್ಲಿ ದತ್ತಿ ಉಪನ್ಯಾಸದ ನಿಮಿತ್ತ ಲೇಖನ

# ಗದುಗಿನ ಕೀರ್ತಿ ಬೆಳಗಿದ ಮಹನೀಯರು




**ದಿ. ಶ್ರೀ ಸುರೇಶ ಸೋಮಯ್ಯ ಶಾಬಾದಿಮಠ:** ಬಹು ಜನರ ಬದುಕು ಏಕತಾನತೆಯಂತೆ ಕಂಡರೂ ಕೆಲವರದು ಮಾತ್ರ ವಿಭಿನ್ನ ಮತ್ತು ವಿಶೇಷ. ಇತರರನ್ನು ಮೀರಿಸುವ ಅವರ ಬದುಕಿನ ಚಟುವಟಿಕೆಗಳು ನೋಡು ನೋಡುತ್ತಿರುವಂತೆ ಅವರು ಬೆಳೆಯುವ ರೀತಿ, ವಿಚಾರ ಸರಣಿಯ ವೇಗ, ಯೋಜನೆಗಳ ತಯಾರಿ, ವಯಸ್ಸನ್ನು ಮೀರಿದ ಹುಮ್ಮಸ್ಸು, ಬದುಕಿನ ಪ್ರೀತಿ ಎಲ್ಲದರಲ್ಲೂ ಕಾಮನಬಿಲ್ಲಿನಂತೆ, ಆಕರ್ಷಣೆ, ಗದುಗಿನ ಸುರೇಶ ಶಾಬಾದಿಮಠರು ಹೀಗೆಯೇ ಇದ್ದರು ಎನ್ನುವದಕ್ಕೆ ಈ ಮಾತು. ಯೋಜನೆ ಮತ್ತು ಯೋಜನೆಗಳ ಓಟವನ್ನು ಹೆಚ್ಚಿಸಿ, ಯಂತ್ರದಂತೆ ಮೆದುಳನ್ನು ಓಡಿಸಿ, ತಲೆತುಂಬ ವಿಚಾರಗಳನ್ನು ತುಂಬಿಕೊಂಡು, ಕೊಡುವದೊಂದನ್ನೇ ಅಭ್ಯಾಸ ಮಾಡಿಕೊಂಡು, ಗೆಳೆಯರ ಬಳಗದಲ್ಲಿ, ಸಾರ್ವಜನಿಕ ವಲಯದಲ್ಲಿ ಗದುಗಿನ ಪರಿಸರದಲ್ಲಿ ಪಾದರಸದಂತೆ ಓಡಾಡಿ, ಮಿಂಚುತ್ತ 44 ಬದುಕಿನ ಆರೋಹಣದ ಘಟ್ಟದಲ್ಲಿಯೇ ಮಸಣದತ್ತ ಪಯಣಿಸಿದರು, ಬಿತ್ತಿದ ಕನಸುಗಳೆಲ್ಲ ಚಿಗುರುವ ಮುನ್ನವೇ ಬತ್ತಿದವರು.

ಪುಸ್ತಕ ಮಾರಾಟ ಮತ್ತು ಪ್ರಕಾಶನ ಪ್ರಪಂಚದಲ್ಲಿ ಗದುಗಿನ ಪಿ.ಸಿ.ಶಾಬಾದಿಮಠರು ನಾಡಿಗೇ ಗೊತ್ತು. ಇವರ ಮೊಮ್ಮಗ, ಸೋಮಶೇಖರಯ್ಯನವರ ಮಗ ಸುರೇಶ ಜಸಿಸಿದ್ದು 1958 ಫೆಬ್ರುವರಿ 10ರಂದು. ಬಿ.ಕಾಂ ಪದವಿ ಪಡೆದು ಎರಡು ವರ್ಷ ಎಲ್.ಎಲ್.ಬಿ. ಅಭ್ಯಸಿಸಿದ ಸುರೇಶರೊಬ್ಬರೇ ಕುಟುಂಬದಲ್ಲಿ ಹೆಚ್ಚು ಕಲಿತದ್ದು, ಅಜ್ಜನಿಂದ ಬಳುವಳಿಯಾಗಿ ಬಂದಿದ್ದು ಪ್ರಕಾಶನ ಮತ್ತು ಪುಸ್ತಕ ವ್ಯಾಪಾರದಲ್ಲಿ ಕೂಡಿಕೊಂಡರು. ಪ್ರಿಂಟಿಂಗ್ ಮಾಧ್ಯಮ ಹಳೆಯತನದಲ್ಲಿತ್ತು, ಮೊದಲಿನಿಂದಲೂ ಚುರುಕಾಗಿ ಆಧುನಿಕತೆಯ ಬದಲಾವಣೆ ಕುರಿತು ವಿಚಾರಿಸುತ್ತಿದ್ದ ಇವರು, 1990ರಲ್ಲಿ ದೆಹಲಿಯಲ್ಲಿ ಏರ್ಪಟ್ಟ ಪ್ರದರ್ಶನದಲ್ಲಿ ಭಾಗವಹಿಸಿದರು ಹಾಗೂ 1990ರಲ್ಲಿ ಆಫ್‌ಸೆಟ್ ಯಂತ್ರ ಅಳವಡಿಸಿದರು.


ಲಿಯೋ ಕ್ಲಬ್ ಸದಸ್ಯರಾಗಿ, 1980-81ರಲ್ಲಿ ಅಧ್ಯಕ್ಷರಾಗಿ ಸಂಸ್ಥೆಗೆ ಹೊಸ ಚೇತನ, ಹುರುಪು ನೀಡಿದರು, ಅಂಗವಿಕಲರನ್ನು ಗುರುತಿಸಿ ಅವರಿಗೆ ಮಾಶಾಸನ ದೊರಕಿಸುವಲ್ಲಿ ಗೆಲವು ಸಾಧಿಸಿದರು. ಅಖಿಲ ಭಾರತ ವೀರಶೈವ ಮಹಾಸಭೆಯ ಸದಸ್ಯರಾಗಿ ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಆಡಳಿತ ಮಂಡಳಿ ಸದಸ್ಯರಾಗಿ ಚಿಕ್ಕ ವಯಸ್ಸಿನಲ್ಲಿ ಬಹುದೊಡ್ಡದಾಗಿ ಬೆಳೆದರು. ವಿದೇಶದಲ್ಲಿ ಪ್ರಿಂಟಿಂಗ್ ಮಾಧ್ಯಮ ಬೆಳೆದಿರುವ ರೀತಿಯನ್ನು 2001ರಲ್ಲಿ ಜರ್ಮನಿಗೆ ಹೋಗಿ ನೋಡಿ ತಿಳಿದುಕೊಂಡು ಬಂದರು.

2002 ಫೆಬ್ರುವರಿ 8ರಂದು ಬಹು ಜನರ ಮನಸ್ಸಿನಲ್ಲಿ ಹಸಿರಾಗಿದ್ದ ಸುರೇಶ ಶಾಬಾದಿಮಠರನ್ನು ಸಾವು ಅಪ್ಪಿಕೊಂಡಿತು. ಪಾದರಸದ ಹುಡುಗನ ಬದುಕಿನ ಹಡಗು ಮಧ್ಯದಲ್ಲಿಯೆ ಮುಳುಗಿತು. ಇವರ ನೆನಪಿಗಾಗಿ ಸಂಸ್ಥೆಯಲ್ಲಿ ದತ್ತಿ ಉಪನ್ಯಾಸ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.



**ಲಿಂ. ಶ್ರೀ ಚಂದನಮಲ್ ಗುಲಾಬಚಂದ ಬಾಗಮಾರ ಕಿರು ಪರಿಚಯ:** ಗಣ್ಯ ವ್ಯಾಪಾರಸ್ಥರು ಹಾಗೂ ಹಿರಿಯರಾದ ಚಂದನಮಲ್ ಗುಲಾಬಚಂದ ಬಾಗಮಾರ ಇವರು 10/05/1943ರಲ್ಲಿ ಜನಿಸಿ ತಮ್ಮ ಪ್ರಾಥಮಿಕ ಹಾಗೂ ಮಾಧ್ಯಮಿಕ ಶಿಕ್ಷಣವನ್ನು ನಗರದ ವಿದ್ಯಾದಾನ ಗಂಡು ಮಕ್ಕಳ ಶಾಲೆಯಲ್ಲಿ ಪೂರೈಸಿ ಮುಂದೆ 1958ರಲ್ಲಿ ತಂದೆಯವರಾದ ಗುಲಾಬಚಂದ ಅವರೊಂದಿಗೆ ಕೈಜೋಡಿಸಿ ವ್ಯಾಪಾರೋದ್ಯಮದ ಕಡೆಗೆ ಮುಖ ಮಾಡಿದರು.

ಆಗ ಗದಗ ಹತ್ತಿ ಅರಳಿ, ಶೇಂಗಾ ವ್ಯಾಪಾರದಲ್ಲಿ ಪ್ರಸಿದ್ಧಿಯಾಗಿತ್ತು. ಆದಾಗ್ಯೂ ಚಂದನಮಲ್ ಶಾಲೆ, ಕಾಲೇಜುಗಳಿಗೆ ಅವಶ್ಯವಾಗಿರುವ ಪರಿಕರಗಳನ್ನು ಪೂರೈಸುವ ಉದ್ಯೋಗವನ್ನು ಕೈಗೊಂಡರು. ಅದರಲ್ಲಿಯೇ ತಮ್ಮ ವ್ಯವಹಾರವನ್ನು ಅಭಿವೃದ್ಧಿಗೊಳಿಸಿದರು. ಹೀಗೆ ಬಾಗಮಾರ ಕುಟುಂಬವು ವ್ಯಾಪಾರದಲ್ಲಿ ಉತ್ತಮವಾದ ಹೆಸರನ್ನು ಗಳಿಸಿಕೊಂಡಿದ್ದು ಚಂದನಮಲ್ಲ ಇವರು ಇವರು 7/10/2021ರಂದು ನಿಧನರಾದರು.



**ದಿ. ಕುಂದನಮಲ್ ಧನರಾಜ ಶಹಾ, ಇವರ ಕಿರು ಪರಿಚಯ:** ರಾಜಸ್ಥಾನದ ಅರಠವಾಡದಲ್ಲಿ ಧನರಾಜ ಶಹಾ-ಗುಲಾಬಿಬಾಯಿ ಇವರ ಜೇಷ್ಠ ಸುಪುತ್ರನಾಗಿ 5.11.1925ರಂದು ಜನಿಸಿದರು. ಕುಂದನಮಲ್ ಧನರಾಜ ಶಹಾ ಪ್ರಾಥಮಿಕ ಶಿಕ್ಷಣವನ್ನು ಗದಗ ನಗರದ ಮುನ್ಸಿಪಲ್ ಹೈಸ್ಕೂಲ್, ಸೈಂಟ್‌ಜಾನ್ ಸ್ಕೂಲ್‌ನಲ್ಲಿ ಪೂರೈಸಿ, ಮಾಧ್ಯಮಿಕ ಶಿಕ್ಷಣವನ್ನು ವಿದ್ಯಾದಾನ ಗಂಡು ಮಕ್ಕಳ ಶಾಲೆಯಲ್ಲಿ ಪೂರೈಸಿದರು. ತಮ್ಮ ಸಹೋದರರೊಂದಿಗೆ ತಮ್ಮದೇ ಆದ ದಿನಸಿ ಕಿರಾಣಿ ಅಂಗಡಿಯನ್ನು ಪ್ರಾರಂಭಿಸಿದರು.

ನಂತರ ತಮ್ಮ ವ್ಯಾಪಾರ ಮತ್ತು ವ್ಯವಹಾರವನ್ನು ವಿಸ್ತರಿಸಿ, 1965ರಲ್ಲಿ ಬಾಂಬೆ ಕ್ಲಾಥ್ ಸ್ಟೋರ್ಸ್ ಪ್ರಾರಂಭಿಸಿದರು. ಮಕ್ಕಳಿಗೆ ಸಮಾಜದಲ್ಲಿ ಒಳ್ಳೆಯ ಶಿಕ್ಷಣವನ್ನು ನೀಡುವ ಮೂಲಕ ವ್ಯಾಪಾರದಲ್ಲಿ ತೊಡಗುವಂತೆ ಮಾಡಿದ್ದಾರೆ. 1969ರಲ್ಲಿ ಸಹೋದರರೊಂದಿಗೆ ಸೇರಿ 600 ಜನರನ್ನು 13 ದಿನಗಳ ಕಾಲ ತಮ್ಮ ಸ್ವಂತ ಖರ್ಚಿನಲ್ಲಿ ತೀರ್ಥ ಯಾತ್ರೆಯನ್ನು ಮಾಡಿಸುವ ಮೂಲಕ ಸಮಾಜದಲ್ಲಿ ತಮ್ಮದೇ ಆದ ಹೆಸರು ಉಳಿಯುವಂತೆ ನೋಡಿಕೊಂಡಿದ್ದಾರೆ. ಜೊತೆಗೆ ಅನೇಕ ಸಂಘ-ಸಂಸ್ಥೆಗಳಲ್ಲಿ ತಮ್ಮದೇ ಆದ ಅನುಪಮವಾದ ಸೇವೆಯನ್ನು ಸಲ್ಲಿಸಿ, 1990 ಅಗಸ್ಟ 10ರಂದು ನಿಧನರಾದರು. ಇವರ ಸವಿನೆನಪಿಗಾಗಿ ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯಲ್ಲಿ ದತ್ತಿ ಉಪನ್ಯಾಸವನ್ನು ಹಮ್ಮಿಕೊಳ್ಳಲಾಗಿದೆ.

### ವಿಪತ್ತು ನಿರ್ವಹಣೆಗೆ 2105.63 ಕೋಟಿ ರೂ ಅನುದಾನ ಲಭ್ಯ: ಡಿಸಿ ದಿವ್ಯ ಪ್ರಭು

# ಕುಡಿಯುವ ನೀರು, ಮೇವು ಕೊರತೆಯಿಲ್ಲ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಪ್ರತೀ ವಾರ ಬರ ಪರಿಸ್ಥಿತಿ ನಿರ್ವಹಣೆ ಕುರಿತು ತಹಸೀಲ್ದಾರ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ನಿರಂತರವಾಗಿ ಪ್ರಗತಿ ಪರಿಶೀಲನೆ ಮಾಡುತ್ತಿರುವುದರಿಂದ ಎಲ್ಲಾ ಅಧಿಕಾರಿಗಳು ಕ್ರಿಯಾಶೀಲವಾಗಿ ತೊಡಗಿಸಿಕೊಂಡು ತಮ್ಮ ತಾಲೂಕಿನ ಸಮಸ್ಯೆಗಳಿಗೆ ನಿಗದಿತ ಸಮಯದಲ್ಲಿ ಸ್ಪಂದಿಸಿ ಪರಿಹರಿಸುತ್ತಿದ್ದಾರೆ. ಇದರಿಂದ ಜಿಲ್ಲೆಯಲ್ಲಿ ಬರ ಪರಿಸ್ಥಿತಿ ನಿರ್ವಹಣೆ ಉತ್ತಮವಾಗಿದ್ದು, ಅಧಿಕಾರಿಗಳು ಪ್ರತಿದಿನ ಗ್ರಾಮಗಳಿಗೆ ಭೇಟಿ ನೀಡಿ, ಜನರ ಸಮಸ್ಯೆ, ಅಹವಾಲುಗಳಿಗೆ ಸ್ಪಂದಿಸಬೇಕೆಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರೂ ಆಗಿರುವ ಜಿಲ್ಲಾಧಿಕಾರಿ ದಿವ್ಯ ಪ್ರಭು ಹೇಳಿದರು.

ಅವರು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ತಹಸೀಲ್ದಾರ, ತಾಲೂಕು ಪಂಚಾಯಿತಿ ಇಓಗಳು ಹಾಗೂ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಧಾರವಾಡ ಜಿಲ್ಲೆಯ ಬರ ಪರಿಸ್ಥಿತಿ ಹಿನ್ನೆಲೆಯಲ್ಲಿ ಕುಡಿಯುವ ನೀರು ಮತ್ತು ಮೇವು ಸಂಗ್ರಹಣೆ ಹಾಗೂ ಬೆಳೆಹಾನಿ ಪರಿಹಾರ ಪ್ರಗತಿ ಬಗ್ಗೆ ಪ್ರಗತಿ ಪರಿಶೀಲನಾ ಸಭೆ ಜರುಗಿಸಿ ಮಾತನಾಡಿದರು.



ಜಿಲ್ಲೆಯಲ್ಲಿ ಬರ ಪರಿಸ್ಥಿತಿಯ ಪೂರ್ವದಲ್ಲಿ ಮೇವು ಸಂಗ್ರಹಣೆಯ ಕಾರ್ಯವನ್ನು ಮಾಡಲಾಗಿದ್ದು, ಧಾರವಾಡ ತಾಲೂಕಿನ ಮದನಬಾವಿ ಮತ್ತು ಹುಬ್ಬಳ್ಳಿ ತಾಲೂಕಿನ ಶಿರಗುಪ್ಪಿ ಗ್ರಾಮದಲ್ಲಿ ಮೇವು ಬ್ಯಾಂಕ ತೆರೆಯಲಾಗಿದೆ. ಅವಶ್ಯಕತೆ ಕಂಡುಬಂದರೆ ಉಳಿದ ತಾಲೂಕುಗಳಲ್ಲಿ ಮೇವು ಬ್ಯಾಂಕ್ ಅಥವಾ ಗೋಶಾಲೆಯನ್ನು ತೆರೆಯಲು ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು ಎಂದು ಡಿಸಿ ದಿವ್ಯ ಪ್ರಭು ಹೇಳಿದರು.

ಕುಡಿಯುವ ನೀರಿನ ಕೊರತೆ ಆಗುವ ಸಂಭವವಿರುವ ಗ್ರಾಮಗಳನ್ನು ಹಿಂದೆಯೇ ಗುರುತಿಸಲಾಗಿತ್ತು. ಅದರಂತೆ ಸಮಸ್ಯಾತ್ಮಕ ಹಳ್ಳಿಗಳನ್ನು ಗುರುತಿಸಿ ಕ್ರಮ ಕೈಗೊಳ್ಳಲಾಗುತ್ತಿದೆ. ಯಾವುದೇ ರೀತಿಯಲ್ಲಿ ಕುಡಿಯುವ ನೀರು, ಜಾನುವಾರುಗಳಿಗೆ ಮೇವು ಕೊರತೆ ಕಂಡುಬಂದಿಲ್ಲ ಎಂದು ಹೇಳಿದರು.

ತಹಸೀಲ್ದಾರರು ಇಓ ಅವರೊಂದಿಗೆ ತಮ್ಮ ತಾಲೂಕಿನ ಪ್ರತಿ ಗ್ರಾಮಗಳಿಗೆ ಭೇಟಿ ನೀಡಬೇಕು. ಭೇಟಿ ಸಂದರ್ಭದಲ್ಲಿ ಗ್ರಾ.ಪಂ ಸದಸ್ಯರು, ಗ್ರಾಮದ ಪ್ರಮುಖರ ಸಭೆ ಜರುಗಿಸಿ ಕುಡಿಯುವ ನೀರು, ದನ ಕರುಗಳಿಗೆ ಮೇವು ಮತ್ತು ನರೇಗಾ ಕೂಲಿ ಕೆಲಸದ ಬಗ್ಗೆ ಸಲಹೆ ಮಾಹಿತಿ ಪಡೆದುಕೊಳ್ಳಬೇಕು. ಅಗತ್ಯಕ್ಕೆ ಅನುಗುಣವಾಗಿ ನಿಯಮಾನುಸಾರ ಕುಡಿಯುವ ನೀರು ಮತ್ತು ಮೇವು ಪೂರೈಕೆಗೆ ಕ್ರಮವಹಿಸಬೇಕೆಂದು ಸೂಚಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಕಾರ್ಯಪಾಲಕ ಅಭಿಯಂತರ ಆರ್.ಎಂ. ಸೋಪ್ಪಾಮಠ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ರಮೇಶ ಬಿ.ಎಸ್, ಜಿಲ್ಲಾ ಪಂಚಾಯತ ಮುಖ್ಯ ಯೋಜನಾಧಿಕಾರಿ ದೀಪಕ ಮಡಿವಾಳರ, ಮಹಾನಗರ ಪಾಲಿಕೆ ಅಧೀಕ್ಷಕ ಅಭಿಯಂತರ ತಿಮ್ಮಪ್ಪ, ಕೃಷಿ ಇಲಾಖೆ ಜಂಟಿ ನಿರ್ದೇಶಕ ಡಾ. ಕೀರಣಕುಮಾರ, ತೋಟಗಾರಿಕೆ ಇಲಾಖೆ ಉಪ ನಿರ್ದೇಶಕ ಕೆ.ಸಿ. ಭದ್ರಣ್ಣವರ, ಪಶುಪಾಲನೆ ಮತ್ತು ಪಶವೈದ್ಯಕೀಯ ಇಲಾಖೆ ಉಪ ನಿರ್ದೇಶಕ ಡಾ. ರವಿ ಸಾಲಿಗೌಡರ ಹಾಗೂ ಎಲ್ಲ ತಾಲೂಕುಗಳ ತಹಸೀಲ್ದಾರರು, ತಾ.ಪಂ ಕಾರ್ಯನಿರ್ವಹಕ ಅಧಿಕಾರಿಗಳು, ನರೇಗಾ ಸಹಾಯಕ ನಿರ್ದೇಶಕರು, ವಿವಿಧ ಇಲಾಖೆಗಳ ಅಧಿಕಾರಿಗಳು ಭಾಗವಸಿದ್ದರು.

# ದೋಷವುಳ್ಳ ಸ್ಕೂಟರ್ ಬದಲಾಯಿಸಿಕೊಡಲು ಆದೇಶಿಸಿದ ಗ್ರಾಹಕ ಆಯೋಗ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಧಾರವಾಡ ಸಾದನಕೇರಿ ಹೆಬ್ಬಳ್ಳಿಕರ ಪ್ಲಾಟ್ ನಿವಾಸಿ ಆನಂದ ಕಲಘಟಗಿ ಎಂಬುವವರು ಟಿ.ವಿ.ಎಸ್. ಮೋಟರ್ ಕಂಪನಿಯ ಡೀಲರ್ ಹುಬ್ಬಳ್ಳಿಯ ಪ್ರಕಲ್ಪ ಮೋಟರ್ಸ್ ಇವರಿಂದ 15.9.2023ರಂದು ರೂ.80,211 ಕೊಟ್ಟು ಟಿ.ವಿ.ಎಸ್. ಸ್ಕೂಟರ್ ಖರೀದಿಸಿದ್ದರು. ವಾಹನದ ಇನ್ಸುರೆನ್ಸ್ ಹಾಗೂ ಅದರ ಬಿಡಿ ಭಾಗಗಳಿಗಾಗಿ ರೂ.23,789 ಹಣಕೊಟ್ಟು ವಾಹನ ಖರೀದಿಸಿದ್ದರು. ಆದರೆ ವಾಹನ ಖರೀದಿಸಿದ ಕೆಲ ದಿನಗಳಲ್ಲಿಯೇ ಅದರಲ್ಲಿ ಉತ್ಪಾದನಾ ದೋಷ ಉಂಟಾಗಿ ವಾಹನ ಸರಿಯಾಗಿ ಕಾರ್ಯನಿರ್ವಹಿಸುತ್ತಿರಲಿಲ್ಲ.

ವಾಹನದ ದುರಸ್ತಿಗಾಗಿ ದೂರುದಾರ ರೂ.1,669 ಖರ್ಚು ಮಾಡಿದರೂ ಏನೂ ಪ್ರಯೋಜನವಾಗಿರಲಿಲ್ಲ. ಸದರಿ ವಾಹನ ವಾರಂಟಿ ಅವಧಿಯೊಳಗೆ ಇದ್ದರೂ ಸರ್ವಿಸ್ ಸೆಂಟರ್‌ನವರು ದುರಸ್ತಿಗಾಗಿ ಹಣ ಪಡೆದಿರುತ್ತಾರೆ. ಇಬ್ಬರೂ ಎದುರುದಾರರ ಈ ನಡಾವಳಿಕೆ ಗ್ರಾಹಕರ ರಕ್ಷಣಾ ಕಾಯ್ದೆ ಅಡಿ ಸೇವಾ ನ್ಯೂತೆ ಹಾಗೂ ಅನುಚಿತ ವ್ಯಾಪಾರದ ಪದ್ಧತಿ ಆಗುತ್ತದೆ ಎಂದು ಇಬ್ಬರೂ ಎದುರುದಾರರ ಮೇಲೆ ಸೂಕ್ತ ಕ್ರಮ ಕೈಗೊಳ್ಳುವಂತೆ ದೂರುದಾರ ಜಿಲ್ಲಾ ಗ್ರಾಹಕರ ಆಯೋಗಕ್ಕೆ 16.12.2023ರಂದು ದೂರನ್ನು ಸಲ್ಲಿಸಿದ್ದರು.




ಸದರಿ ದೂರಿನ ಬಗ್ಗೆ ಕೂಲಂಕುಷವಾಗಿ ವಿಚಾರಣೆ ನಡೆಸಿದ ಆಯೋಗದ ಅಧ್ಯಕ್ಷ ಈಶಪ್ಪ ಭೂತೆ ಹಾಗೂ ಸದಸ್ಯರಾದ ವಿ.ಅ. ಬೋಳಶೆಟ್ಟಿ ದೂರುದಾರ ರೂ.80,211 ಮತ್ತು ವಾಹನದ ಇನ್ಸುರೆನ್ಸ್, ವಾಹನದ ಇತರೇ ಭಾಗಗಳಿಗಾಗಿ ರೂ.23,789 ಹೀಗೆ ಒಟ್ಟು ರೂ. 1,04,000 ಹಣಕೊಟ್ಟು ಸ್ಕೂಟರ್ ಖರೀದಿಸಿದ ಕೆಲವೇ ದಿನಗಳಲ್ಲಿ ಅದರಲ್ಲಿ ಉತ್ಪಾದನಾ ದೋಷ ಕಂಡುಬಂದಿತ್ತು. ಆದರೆ ಆ ವಾಹನದ ಉತ್ಪಾದಕರಾಗಲಿ, ಡೀಲರ್ ಆಗಲಿ ಆ ದೋಷವನ್ನು ವಾರಂಟಿ ಅವದಿಯಲ್ಲಿ ಉಚಿತವಾಗಿ ದುರಸ್ತಿ ಮಾಡದೇ ಹಣ ಪಡೆದಿರುವುದು ಗ್ರಾಹಕ ರಕ್ಷಣಾ ಕಾಯಿದೆ ಅಡಿ ಸೇವಾ ನ್ಯೂನತೆ ಆಗುತ್ತದೆ ಎಂದು ಆಯೋಗ ಅಭಿಪ್ರಾಯಪಟ್ಟು ತೀರ್ಪು ನೀಡಿದೆ.

ದೂರುದಾರರಿಗೆ ತೀರ್ಪು ನೀಡಿದ ಒಂದು ತಿಂಗಳೊಳಗಾಗಿ ಹಳೆಯ ಟಿ.ವಿ.ಎಸ್. ಸ್ಕೂಟರ್ ಹಿಂಪಡೆದು ನೂತನ ವಾಹನ ಕೊಡಲು ಆದೇಶಿಸಿದೆ. ತಪ್ಪಿದ್ದಲ್ಲಿ ಒಟ್ಟು ರೂ.1,04,000 ಹಣ, ಶೇ.8ರಂತೆ ತೀರ್ಪು ನೀಡಿದ ದಿನಾಂಕದಿಂದ ಬಡ್ಡಿ ಲೆಕ್ಕ ಹಾಕಿ ಒಂದು ತಿಂಗಳ ಒಳಗಾಗಿ ಪೂರ್ತಿ ಹಣ ಕೊಡಲು ಆಯೋಗ ಟಿ.ವಿ.ಎಸ್. ಮೋಟರ್ ಕಂಪನಿ ಹಾಗೂ ಟಿ.ವಿ.ಎಸ್. ಪ್ರಕಲ್ಪ ಮೋಟರ್ಸ್ ಅವರುಗಳಿಗೆ ನಿರ್ದೇಶಿಸಿದೆ. ದೂರುದಾರರು ಅನುಭವಿಸಿದ ಮಾನಸಿಕ ತೊಂದರೆ ಹಾಗೂ ಅನಾನುಕೂಲತೆಗಾಗಿ ತಲಾ ರೂ.25,000 ಪರಿಹಾರ ಹಾಗೂ ರೂ.10,000 ಪ್ರಕರಣದ ಖರ್ಚು-ವೆಚ್ಚ ನೀಡುವಂತೆ ಇಬ್ಬರೂ ಎದುರುದಾರರಿಗೆ ಆಯೋಗ ಆದೇಶಿಸಿದೆ.

**ಭಕ್ತರ ಇಷ್ಟಾರ್ಥಗಳನ್ನು ನೆರವೇರಿಸುವ ಕಾಮಣ್ಣ | 3 ವರ್ಷಕ್ಕೊಮ್ಮೆ ರತಿ-ಕಾಮಣ್ಣರ ಉತ್ಸವ**



# ನರೇಗಲ್ಲ ಕಾಮಣ್ಣನಿಗೀಗ 320 ವರ್ಷ


■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದ ಹಳೆ ಬಸ್ ನಿಲ್ದಾಣದ ಬಳಿಯ ಡಾ. ಕಾಳೆಯವರ ಆಸ್ಪತ್ರೆಯ ಹತ್ತಿರ ಪ್ರತಿಷ್ಠಾಪಿಸಲ್ಪಡುವ ಕಾಮಣ್ಣನಿಗೆ ಈಗ ಭರ್ತಿ 320 ವರ್ಷಗಳು! 320 ವರ್ಷಗಳ ಹಿಂದೆ ರೈಲು ಮೂಲಕ ನರೇಗಲ್ಲಿಗೆ ಬಂದ ಈ ರತಿ-ಕಾಮಣ್ಣರ ಮೂರ್ತಿಗಳನ್ನು ನರೇಗಲ್ಲದ ಹಿರಿಯರು ಹರ್ಲಾಪುರದ ರೈಲು ನಿಲ್ದಾಣದಿಂದ ಹೊರಸಿನ ಮೇಲೆ ನರೇಗಲ್ಲಿಗೆ ಕರೆತಂದರು ಎಂದು ಇಲ್ಲಿನ ಹಿರಿಯರು ನೆನಪಿಸಿಕೊಳ್ಳುತ್ತಾರೆ. ಅಂದು ಅವರು ಯಾವ ಸಂಪ್ರದಾಯವನ್ನು ಹಾಕಿ ಹೋಗಿದ್ದಾರೆಯೋ ಅದರಂತೆಯೇ ಇಂದಿನ ಹಿರಿಯರು ಮತ್ತು ಯುವಕರು ಪ್ರತಿ 3 ವರ್ಷಕ್ಕೊಮ್ಮೆ ರತಿ-ಕಾಮಣ್ಣರ ಮೂರ್ತಿಯನ್ನು ಪ್ರತಿಷ್ಠಾಪಿಸಿ ಪೂಜಿಸುತ್ತ ಬಂದಿದ್ದಾರೆ.

ಈ ಕಾಮಣ್ಣನ ಪೂಜೆಯನ್ನು ಭಕ್ತಿಯಿಂದ ಮಾಡಿದರೆ ಅವನು ಭಕ್ತರ ಇಷ್ಟಾರ್ಥಗಳನ್ನು ಈಡೇರಿಸುತ್ತಾನೆ ಎಂಬ ನಂಬುಗೆ ಪಟ್ಟಣದ ಮತ್ತು ಸುತ್ತಲಿನ ಜನರಲ್ಲಿದೆ. ಅಲ್ಲದೆ ಬಹಳ ದಿನಗಳಿಂದ ಮಕ್ಕಳಾಗದ ದಂಪತಿಗಳು ಶ್ರದ್ಧೆಯಿಂದ ಈ ಕಾಮಣ್ಣನನ್ನು ಪೂಜಿಸಿದರೆ ಮಕ್ಕಳಾಗುತ್ತವೆ ಎಂಬ ನಂಬುಗೆಯೂ ಚಾಲ್ತಿಯಲ್ಲಿದ್ದು, ಇಲ್ಲಿನ ಹಿರಿಯರು ಅದನ್ನು ಅನುಮೋದಿಸುತ್ತಾರೆ. ಹೀಗೆ ಭಕ್ತರ ಕಾಮಧೇನುವಾಗಿರುವ ಈ ಕಾಮಣ್ಣ ಮಾ.21ರಿಂದ 25ರವರೆಗೆ ಭಕ್ತರಿಗೆ ದರುಶನಾಶೀರ್ವಾದ ನೀಡಲಿದ್ದಾನೆ.

ಮಾ.26ರಂದು ಬೆಳಿಗ್ಗೆ 7 ಗಂಟೆಗೆ ವಿಚಿತ್ರವಾದ ವೇಷಭೂಷಣ(ಸೋಗು) ಹಾಕಿಕೊಂಡು ಟ್ರ್ಯಾಕ್ಟರ್‌ನಲ್ಲಿ ಬಣ್ಣ ತುಂಬಿದ ಪಾತ್ರೆಗಳನ್ನು ಇಟ್ಟುಕೊಂಡು ಪಟ್ಟಣದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಮಾಡುತ್ತ ಹೋಳಿ ಆಟವನ್ನು ಆಡಲಾಗುತ್ತದೆ. ಇಂಥ ವಿಶೇಷತೆ ಹೊಂದಿರುವ ಕಾಮಣ್ಣನನ್ನು ಪ್ರತಿ ಮೂರು ವರ್ಷಗಳಿಗೊಮ್ಮೆ ಪ್ರತಿಷ್ಠಾಪಿಸಲಾಗುತ್ತದೆ. ರತಿ-ಕಾಮರ ಜತೆಗೆ ಇಲ್ಲಿ ಪರಮೇಶ್ವರ, ಋಷಿ ಮುನಿಗಳು, ರಾಜಾ, ಮನ್ಮಥ್, ರಾಣಿ, ಕೊರವ ಮತ್ತು ಮಂಗ ಎಂಬ ಇತರೆ ಹತ್ತು ಗೊಂಬೆಗಳನ್ನು ಕೂರಿಸಲಾಗುತ್ತಿದೆ. ಈ ಎಲ್ಲ ಗೊಂಬೆಗಳಿಗೆ 10ರಿಂದ 15 ವರ್ಷಗಳಿಗೊಮ್ಮೆ ಬಣ್ಣ ಹಚ್ಚಲಾಗುತ್ತದೆ. ಈ ಹಿಂದೆ ಉಡಿ ತುಂಬಿ ಸಂತಾನ ಭಾಗ್ಯ ಹೊಂದಿದ ತಾಯಂದಿರು ಕಾಮಣ್ಣನಿಗೆ ಸೀರೆ ಬಟ್ಟೆಗಳನ್ನು ಉಡುಗೊರೆಯಾಗಿ ನೀಡುತ್ತಾರೆ.

ನರೇಗಲ್ಲನ ಕಾಮಣ್ಣನಿಗೆ 320 ವರ್ಷಗಳ ಇತಿಹಾಸವಿದ್ದು, ಇಲ್ಲಿ ಭಕ್ತಿಯಿಂದ ಬೇಡಿಕೊಂಡು ದೇವರಿಗೆ ಉಡಿ ತುಂಬಿದರೆ, ಕಂಕಣ ಭಾಗ್ಯ, ಸಂತಾನ ಭಾಗ್ಯ ಸೇರಿದಂತೆ ಇತರೆ ಇಷ್ಟಾರ್ಥಗಳು ಸಿದ್ಧಿಯಾಗುತ್ತವೆ ಎಂಬ ನಂಬಿಕೆ ಭಕ್ತರದ್ದಾಗಿದೆ. ಹೀಗಾಗಿ ಈ ಐದು ದಿನಗಳ ಕಾಲ ರತಿ-ಕಾಮಣ್ಣರಿಗೆ ಉಡಿ ತುಂಬಲು ದೊಡ್ಡ ಸಾಲೇ ನೆರೆದಿರುತ್ತದೆ. ನಮ್ಮ ಹಿರಿಯರು ನಡೆಸಿಕೊಂಡು ಬಂದ ಪದ್ಧತಿಯನ್ನು ನಾವು ಮುಂದುವರೆಸಿಕೊಂಡು ಹೋಗುತ್ತಿದ್ದೇವೆ ಎನ್ನುತ್ತಾರೆ ಶಶಿಧರ ಸಂಕನಗೌಡ್ರ, ಉಮೇಶ ಕೊತಬಾಳ, ಗವಿಸಂಗಪ್ಪ ದಿಂಡೂರ, ಮೈಲಾರಪ್ಪ ಗೋಡಿ, ಶೇಖಪ್ಪ ಜುಟ್ಲ, ಸುರೇಶ ಹುನಗುಂದ ಮತ್ತು ನರೇಗಲ್ಲ ಕಾಮಣ್ಣನ ಉತ್ಸವ ಸಮಿತಿ ಸದಸ್ಯರು.

ಇಲ್ಲಿನ ಹಿರಿಯರು ಮತ್ತು ಯುವಕರು 300 ವರ್ಷ ಕಳೆದರೂ ಯಾವುದೇ ಮೂರ್ತಿಗಳನ್ನು ಬದಲಾವಣೆ ಮಾಡಿಲ್ಲ. ಅವು ಮುಕ್ಕಾಗದಂತೆ ಕಾಪಾಡಿಕೊಂಡು ಬಂದಿದ್ದಾರೆ. ಈ ಹಿಂದೆ 2016ರಲ್ಲಿ ಕಾಮಣ್ಣನ ಮೂರ್ತಿ ಪ್ರತಿಷ್ಠಾಪನೆಯಾಗಿತ್ತು. 2019ರಲ್ಲಿ ಕೊರೊನಾ ಹಿನ್ನೆಲೆಯಲ್ಲಿ ಉತ್ಸವ ರದ್ದಾಗಿತ್ತು. ನಂತರ 2022ರಲ್ಲಿ ಕಾಮಣ್ಣನ ಮೂರ್ತಿ ಪ್ರತಿಷ್ಠಾಪಿಸಲಾಗಿದ್ದು, ಈಗ 3 ವರ್ಷಗಳ ನಂತರ ಮತ್ತೆ ಕಾಮಣ್ಣನ ಪ್ರತಿಷ್ಠಾಪನೆ ನಡೆಯುತ್ತಿದೆ. ಈ ಉತ್ಸವದ ಸಂದರ್ಭದಲ್ಲಿ ಮಾ. 24ರಂದು ರಸಮಂಜರಿ, ಮಾ.25ರಂದು ಗೀಗೀ ಪದಗಳ ಗಾಯನ ಜರುಗಲಿವೆ.

ನರೇಗಲ್ಲನ ಕಾಮಣ್ಣನಿಗೆ ಮದುವೆಯಾಗದವರು, ಮಕ್ಕಳಾಗದವರು ಸೇರಿದಂತೆ ಆರೋಗ್ಯ, ಸಂಪತ್ತು, ವಿದ್ಯೆ ಇತರೆ ಇಷ್ಟಾರ್ಥಗಳ ಬೇಡಿಕೆಗಳಿಗಾಗಿ ಕಾಮನ ಪಾದ, ಕಾಮನ ಹಸ್ತ, ಪಂಚಲೋಹದ ತೊಟ್ಟಿಲು, ಕಂಕಣಗಳನ್ನು ಪಡೆದುಕೊಂಡು ಹೋಗಿ ಮನೆಯಲ್ಲಿ ನಿತ್ಯ ಪೂಜೆ ಸಲ್ಲಿಸಲಾಗುತ್ತದೆ. ಇದರಿಂದ ಭಕ್ತಾದಿಗಳ ಇಷ್ಟಾರ್ಥಗಳು ಸಿದ್ಧಿಯಾಗುತ್ತವೆ ಎಂಬ ಬಲವಾದ ನಂಬಿಕೆ ಇಲ್ಲಿನ ಭಕ್ತರಲ್ಲಿದೆ.

ನರೇಗಲ್ಲನ ಕಾಮಣ್ಣನ ಮೂರ್ತಿಗಳನ್ನು ಐದು ದಿನಗಳ ಕಾಲ ಕೂರಿಸಿ, ಸಾರ್ವಜನಿಕರ ದರ್ಶನಕ್ಕೆ ಅನುವು ಮಾಡಿಕೊಡಲಾಗುತ್ತದೆ. ಈ ಮೂರ್ತಿಗಳಿಗೆ ಪ್ರತಿದಿನ ಎರಡು ಬಾರಿ ಪೂಜೆ ಸಲ್ಲಿಸಲಾಗುತ್ತದೆ. ಪಟ್ಟಣ ಸೇರಿದಂತೆ ಸುತ್ತಲಿನ ಕೋಡಿಕೊಪ್ಪ, ಕೋಚಲಾಪೂರ, ತೋಟಗಂಟಿ, ಮಲ್ಲಾಪೂರ, ದ್ಯಾಂಪೂರ, ಅಬ್ಬಿಗೇರಿ, ಜಕ್ಕಲಿ, ನಿಡಗುಂದಿ, ಮಾರನಬಸರಿ, ಬೂದಿಹಾಳ, ಮುಂತಾದ ಸುತ್ತಲಿನ ಗ್ರಾಮಗಳ ಜನರು ಜಾತಿ-ಧರ್ಮದ ಭೇದವಿಲ್ಲದೆ ಈ ಉತ್ಸವದಲ್ಲಿ ಸಕ್ರೀಯವಾಗಿ ಭಾಗವಹಿಸುತ್ತಾರೆ.

## ಚೆಕ್‌ಪೋಸ್ಟ್ ಸಿಬ್ಬಂದಿ ಕಾರ್ಯಾಚರಣೆ: ಅಕ್ರಮ ಹಣ, ಬೆಳ್ಳಿ ವಸ್ತುಗಳು ಜಪ್ತಿ



■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಲೋಕಸಭಾ ಚುನಾವಣೆ ಘೋಷಣೆಯ ನಂತರ ಮತದಾರರನ್ನು ಸೆಳೆಯಲು ನಾನಾ ರಾಜಕೀಯ ಪಕ್ಷಗಳ ನಡೆಸುವ ವಾಮಮಾರ್ಗಳಿಗೆ ಬ್ರೇಕ್ ಹಾಕಲು ಗದಗ ಜಿಲ್ಲಾಡಳಿತ ವ್ಯಾಪಕ ಬಂದೂಬಸ್ತ್ ಕೈಗೊಂಡಿದೆ.

ಮತದಾರರನ್ನು ಸೆಳೆಯಲು ಅಕ್ರಮ ಹಣ, ಹೆಂಡ ಸೇರಿದಂತೆ ವಿವಿಧ ರೀತಿಯ ಆಮಿಷಗಳನ್ನು ತಡೆಗಟ್ಟಲು ಜಿಲ್ಲೆಯಲ್ಲಿ 12 ಚೆಕ್ ಪೋಸ್ಟ್ ಸ್ಥಾಪಿಸಲಾಗಿದೆ.

ನಿನ್ನೆಯಷ್ಟೇ ರೋಣ ತಾಲೂಕಿನ ಹಿರೇಹಾಳ ಚೆಕ್ ಪೋಸ್ಟ್ ನಲ್ಲಿ ಲಕ್ಷಾಂತರ ರೂಪಾಯಿ ನಗದು ವಶಪಡಿಸಿಕೊಂಡ ಬೆನ್ನಲ್ಲೇ ಮಧ್ಯರಾತ್ರಿ ಗಜೇಂದ್ರಗಡ ಸಮೀಪದ ಚಿಲಝುರಿ ಕ್ರಾಸ್‌ನಲ್ಲಿ ಇರುವ ಚೆಕ್‌ಪೋಸ್ಟ್‌ನಲ್ಲಿ 1ಲಕ್ಷ 32 ಸಾವಿರ ಹಣ ಸಿಕ್ಕಿದೆ.

ಹುಬ್ಬಳ್ಳಿಯಿಂದ ಗಜೇಂದ್ರಗಡ ಪಟ್ಟಣಕ್ಕೆ ಬರುತ್ತಿದ್ದ ಟಾಟಾಏಸ್ ವಾಹನದಲ್ಲಿ ಈ ಹಣ ಸಾಗಾಟ ಮಾಡಲಾಗುತ್ತಿತ್ತು ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ.

ಹುಬ್ಬಳ್ಳಿ ಮೂಲದ ಮಹಮ್ಮದ್ ಗೌಸ್ ಈ ಹಣ ಸಾಗಾಟ ಮಾಡುತ್ತಿದ್ದರು ಎನ್ನಲಾಗಿದೆ.

ಸಾರಿಗೆ ಸಂಸ್ಥೆಯ ಬಸ್‌ನಲ್ಲಿ ಅಕ್ರಮವಾಗಿ ಎರಡು ಕೆ.ಜಿ ತೂಕದ ಬೆಳ್ಳಿ ವಸ್ತುಗಳನ್ನು ಕೂಡ ಜಪ್ತಿ ಮಾಡಲಾಗಿದೆ.

ಗದಗ ನಗರದಿಂದ ಗಜೇಂದ್ರಗಡ ಪಟ್ಟಣಕ್ಕೆ ಈ ಬೆಳ್ಳಿ ವಸ್ತುಗಳನ್ನು ಸಾಗಾಟ ಮಾಡಲಾಗುತ್ತಿತ್ತು ಎನ್ನಲಾಗಿದೆ. ಯಾವುದೇ ದಾಖಲೆ ಇಲ್ಲದೆ ಗದಗ ಮೂಲದ ಗುರುವಂಥನ್ ಎಂಬುವವರು ಈ ಬೆಳ್ಳಿ ವಸ್ತುಗಳನ್ನು ಸಾಗಾಟ ಮಾಡುತ್ತಿದ್ದರು ಎಂದು ಸಿಬ್ಬಂದಿ ಮಾಹಿತಿ ನೀಡಿದ್ದಾರೆ.

ಹಣ ಹಾಗೂ ಬೆಳ್ಳಿ ವಸ್ತುಗಳನ್ನು ಚುನಾವಣಾ ಅಧಿಕಾರಿಗಳು ತಮ್ಮ ವಶಕ್ಕೆ ತೆಗೆದುಕೊಂಡಿದ್ದಾರೆ.

ಈ ಎರಡು ಪ್ರಕರಣಗಳು ಗಜೇಂದ್ರಗಡ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿವೆ.

**ಹುಲಕೋಟಿಯ ಕೆವಿಕೆಯಲ್ಲಿ ನೈಸರ್ಗಿಕ ಕೃಷಿ ಕುರಿತು ಕೃಷಿ ಸಖಿಯರಿಗೆ ತರಬೇತಿ**

## ರೈತರಿಗೆ ನೈಸರ್ಗಿಕ ಕೃಷಿಯ ಮಹತ್ವ ತಿಳಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಕೃಷಿ ಹಾಗೂ ಕುಟುಂಬ ಕಲ್ಯಾಣ ಮಂತ್ರಾಲಯ ನವದೆಹಲಿ, ನ್ಯಾಷನಲ್ ಇನ್‌ಸ್ಟಿಟ್ಯೂಟ್ ಆಫ್ ಅಗ್ರಿಕಲ್ಚರಲ್ ಎಕ್ಸ್‌ಟೆನ್ಶನ್ ಮ್ಯಾನೇಜ್‌ಮೆಂಟ್ ಹೈದರಾಬಾದ, ಸಂಜೀವಿನಿ-ಕೆ.ಎಸ್.ಆರ್.ಎಲ್.ಪಿ.ಎಸ್. ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ & ಜೀವನೋಪಾಯ ಇಲಾಖೆ ಮತ್ತು ಹುಲಕೋಟಿಯ ಐ.ಸಿ.ಎ.ಆರ್-ಕೆ.ಎಚ್. ಪಾಟೀಲ ಕೃಷಿ ವಿಜ್ಞಾನ ಕೇಂದ್ರ ಇವರ ಸಹಯೋಗದೊಂದಿಗೆ ನೈಸರ್ಗಿಕ ಕೃಷಿ ಕುರಿತಂತೆ ಕೃಷಿ ಜೀವನೋಪಾಯ ಸಮುದಾಯ ಸಂಪನ್ಮೂಲ ವ್ಯಕ್ತಿಗಳಿಗೆ (ಕೃಷಿ ಸಖಿಯರಿಗೆ) ಐದು ದಿನಗಳ ತರಬೇತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಜಿ.ಪಂ ಯೋಜನಾ ನಿರ್ದೇಶಕ ಜಗದೇವ್ ಬಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ರೈತರಿಗೆ ಕೃಷಿ ತಾಂತ್ರಿಕತೆಗಳನ್ನು ವರ್ಗಾವಣೆ ಮಾಡುವಲ್ಲಿ ಕೃಷಿ ಸಖಿಯರ ಪಾತ್ರ ಮುಖ್ಯವಾದುದು. ಈ ನಿಟ್ಟಿನಲ್ಲಿ ಎಲ್ಲ ಕೃಷಿ ಸಖಿಯರು ವಿವಿಧ ಋತುವಿನಲ್ಲಿ ಬೆಳೆಯುವ ಬೆಳೆಗಳಿಗೆ ಸೂಕ್ತ ಮಾಹಿತಿಯನ್ನು ತಿಳಿಸಬೇಕು ಮತ್ತು ಕೃಷಿ ವಿಸ್ತರಣಾ ಕಾರ್ಯಕರ್ತರಾಗಿ ತಮ್ಮ ಗ್ರಾಮದಲ್ಲಿ ರೈತರಿಗೆ ಸೇವೆಯನ್ನು ಒದಗಿಸಬೇಕೆಂದು ತಿಳಿಸಿದರು.



ಮುಖ್ಯ ಅತಿಥಿಗಳಾಗಿ ಪಾಲ್ಗೊಂಡ ಸಂಜೀವಿನಿ ಯೋಜನೆಯ ಜಿಲ್ಲಾ ಕಾರ್ಯಕ್ರಮ ವ್ಯವಸ್ಥಾಪಕ ಚಂದ್ರಶೇಖರ ಎಮ್.ಎಲಿಗಾರ ಮಾತನಾಡಿ, ಕೃಷಿ ವಿಜ್ಞಾನ ಕೇಂದ್ರ, ಕೃಷಿ ಇಲಾಖೆ, ರೈತರು ಮತ್ತು ಸಂಜೀವಿನ ಯೋಜನೆಗೆ ಕೃಷಿ ಸಖಿಯರು ಸೇತುವೆಯಾಗಿ ಕೆಲಸ ಮಾಡಬೇಕು. ಕೃಷಿ ಮಾಹಿತಿಯನ್ನು ಸಕಾಲದಲ್ಲಿ ರೈತರಿಗೆ ಮುಟ್ಟಿಸಲು ನೆರವಾಗಬೇಕೆಂದು ಹೇಳಿದರು.

ಕೃಷಿ ವಿಜ್ಞಾನ ಕೇಂದ್ರದ ಹಿರಿಯ ವಿಜ್ಞಾನಿ ಡಾ. ಸುಧಾ ವ್ಹಿ.ಮಂಕಣಿ ಅಧ್ಯಕ್ಷತೆ ವಹಿಸಿ ಮಾತನಾಡಿ, ಕೃಷಿ ಸಖಿಯರು ರೈತರನ್ನು ನೈಸರ್ಗಿಕ ಕೃಷಿ ಅಳವಡಿಸಿಕೊಳ್ಳಲು ಪ್ರೋತ್ಸಾಹವನ್ನು ನೀಡಿ ರೈತರಿಗೆ ನೈಸರ್ಗಿಕ ಕೃಷಿಯ ಮಹತ್ವವನ್ನು ತಿಳಿಸಬೇಕೆಂದು ಹೇಳಿದರು.

ಇದೇ ಸಂದರ್ಭದಲ್ಲಿ ನೈಸರ್ಗಿಕ ಕೃಷಿ ತರಬೇತಿ ಕೈಪಿಡಿಯನ್ನು ಬಿಡುಗಡೆ ಮಾಡಲಾಯಿತು. ನೈಸರ್ಗಿಕ ಕೃಷಿಯ ಪರಿಕರಗಳ ತಯಾರಿಕೆಯ ಪ್ರಾತ್ಯಕ್ಷಿಕೆ ಹಾಗೂ ಅವುಗಳ ಮಹತ್ವ, ಮಣ್ಣಿನಲ್ಲಿರುವ ಪೋಷಕಾಂಶಗಳು, ಸಾವಯವ ಪರಿಕರಗಳು, ಪೌಷ್ಠಿಕ ತೋಟ, ಹೈನು ದನಗಳ ಪೋಷಣೆ, ನೈಸರ್ಗಿಕ ಕೃಷಿಯಲ್ಲಿ ತೋಟಗಾರಿಕೆ ಹಾಗೂ ಪ್ರಗತಿಪರ ರೈತರಿಂದ ಅನುಭವ ಹಂಚಿಕೆ ತರಬೇತಿಯ ವಿಶೇಷವಾಗಿತ್ತು.

ವಿಜ್ಞಾನಿಗಳಾದ ಡಾ. ವಿನಾಯಕ ನಿರಂಜನ್ ಸ್ವಾಗತಿಸಿದರು. ನಾರಾಯಣ ಭಂಡಿ, ಹೇಮಾವತಿ ಹಿರೇಗೌಡರ, ಸುರೇಶ ಹಳೇಮನಿ ಉಪಸ್ಥಿತರಿದ್ದರು.

**ಕಳ್ಳಭಟ್ಟಿ, ನಕಲಿ ಮದ್ಯ, ಅಬಕಾರಿ ಅಕ್ರಮಗಳ ನಿಯಂತ್ರಣಕ್ಕೆ ಸಹಾಯವಾಣಿ**

## ಅಕ್ರಮಗಳ ಬಗ್ಗೆ ಮಾಹಿತಿ ನೀಡಿ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಲೋಕಸಭಾ ಸಾರ್ವತ್ರಿಕ ಚುನಾವಣೆ-2024ರ ಹಿನ್ನೆಲೆಯಲ್ಲಿ ಚುನಾವಣೆ ಸಮಯದಲ್ಲಿ ಅಕ್ರಮ ಮದ್ಯ ಹಾಗೂ ಕಳ್ಳಭಟ್ಟಿ ಸಾರಾಯಿ ತಯಾರಿಸಿ, ಸಂಗ್ರಹಿಸಿ, ಮಾರಾಟ ಮಾಡುವಂತಹ ಅಕ್ರಮಗಳು ಮಾಡುವ ಹಾಗೂ ಇಂತಹ ಕಳ್ಳ ಭಟ್ಟಿಯನ್ನು ಮತದಾರರಿಗೆ ಸರಬರಾಜು ಮಾಡುವ ಸಾಧ್ಯತೆ ಇರುತ್ತದೆ. ಇವುಗಳನ್ನು ತಡೆಗಟ್ಟಲು ಅಬಕಾರಿ ಇಲಾಖೆ ಅಗತ್ಯ ಕ್ರಮಗಳನ್ನು ಕೈಗೊಂಡಿದ್ದು, ಸಾರ್ವಜನಿಕರು ಮಾಹಿತಿ ನೀಡಲು 18004250742 ಸಹಾಯವಾಣಿ ಆರಂಭಿಸಲಾಗಿದೆ ಎಂದು ಅಬಕಾರಿ ಉಪ ಆಯುಕ್ತರು ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಚುನಾವಣೆಯ ಸಂದರ್ಭದಲ್ಲಿ ಪ್ರತಿಷ್ಠಿತ ಕಂಪನಿಗಳ ಹೆಸರಿನಲ್ಲಿ ನಕಲಿ ಮದ್ಯ ತಯಾರಿಕೆ, ಮಾರಾಟ ಮಾಡುವುದು ಕಂಡು ಬರುತ್ತದೆ. ನಕಲಿ ಮದ್ಯ ತಯಾರಿಕೆ, ಮಾರಾಟ ಮಾಡುವಂತಹ ಚಟುವಟಿಕೆಗಳು ತಮ್ಮ ವ್ಯಾಪ್ತಿ ಪ್ರದೇಶದ ಸುತ್ತ ಮುತ್ತ ಕಂಡುಬಂದಲ್ಲಿ ಸಂಬಂಧಪಟ್ಟ ಕಂಟ್ರೋಲ್ ರೂಮ್ ಟೋಲ್ ಫ್ರೀ ದೂರವಾಣಿ ಸಂಖ್ಯೆಗೆ ಸಾರ್ವಜನಿಕರು ಕರೆ ಮಾಡಿ ಮಾಹಿತಿ ನೀಡಲು ಅವರು ಕೋರಿದ್ದಾರೆ.




ಚುನಾವಣೆ ಸಂದರ್ಭದಲ್ಲಿ ಮತದಾರರಿಗೆ ಹಂಚಲು ಅಥವಾ ಅಕ್ರಮ ಚಟುವಟಿಕೆಗಳನ್ನು ನಡೆಸಲು ಮಾಡುವ ಕಳಭಟ್ಟಿ ಸರಾಯಿ, ನಕಲಿ ಮದ್ಯ ತಯಾರಿಕೆ ಸಂಗ್ರಹಣೆ ಮತ್ತು ಮಾರಾಟ ಮಾಡುವ ಕಾನೂನು ಬಾಹಿರ ಕೃತ್ಯಗಳ ಬಗ್ಗೆ ಸಾರ್ವಜನಿಕರು ಅಬಕಾರಿ ಇಲಾಖೆಗೆ ಮಾಹಿತಿ ನೀಡಬಹುದಾಗಿದಾಗಿದೆ.

ಇಂತಹ ಘಟನೆಗಳು ಕಂಡುಬಂದಲ್ಲಿ ಈ ಕೆಳಗಿನ ಅಧಿಕಾರಿಗಳಿಗೆ ಮಾಹಿತಿ ನೀಡಬಹುದು. ಧಾರವಾಡ ಜಿಲ್ಲೆಯ ಅಬಕಾರಿ ಉಪ ಆಯುಕ್ತರು-9449597083, ಧಾರವಾಡ ಉಪ ವಿಭಾಗದ ಉಪ ಅಧೀಕ್ಷಕರು-9632828977, ಹುಬ್ಬಳ್ಳಿ ಉಪ ವಿಭಾಗದ ಅಬಕಾರಿ ಉಪ ಅಧೀಕ್ಷಕರು-9845046852, ಡಿ.ಸಿ.ಇ ಕಚೇರಿಯ ಅಬಕಾರಿ ನಿರೀಕ್ಷಕರು -9449597085, ಧಾರವಾಡ ಉಪ ವಿಭಾಗದ ಅಬಕಾರಿ ನಿರೀಕ್ಷಕರು -9972044752, ಹುಬ್ಬಳ್ಳಿ ಉಪ ವಿಭಾಗದ ಅಬಕಾರಿ ನಿರೀಕ್ಷಕರು-7026038079, ಧಾರವಾಡ ಅಬಕಾರಿ ನಿರೀಕ್ಷಕರು-9740770414, ಹುಬ್ಬಳ್ಳಿ ವಲಯ 1ರ ಅಬಕಾರಿ ನಿರೀಕ್ಷಕರು-9383477936, ಹುಬ್ಬಳ್ಳಿ ವಲಯ 2ರ ಅಬಕಾರಿ ನಿರೀಕ್ಷಕರು-9844617022, ಹುಬ್ಬಳ್ಳಿ ವಲಯ 3ರ ಅಬಕಾರಿ ನಿರೀಕ್ಷಕರು-9844035998, ಹುಬ್ಬಳ್ಳಿ ವಲಯ 4ರ ಅಬಕಾರಿ ನಿರೀಕ್ಷಕರು-9686899897, ನವಲಗುಂದ ವಲಯದ ಅಬಕಾರಿ ನಿರೀಕ್ಷಕರು-9902747011, ಕಲಘಟಗಿ ವಲಯದ ಅಬಕಾರಿ ನಿರೀಕ್ಷಕರು-9663436479, ಕುಂದಗೋಳ ವಲಯದ ಅಬಕಾರಿ ನಿರೀಕ್ಷಕರು-7760570183 ಈ ಸಹಾಯವಾಣಿ ಸಂಖ್ಯೆಗಳಿಗೆ ಕರೆಮಾಡಿ ಮಾಹಿತಿ ನೀಡಬಹುದಾಗಿದೆ ಎಂದು ಅಬಕಾರಿ ಇಲಾಖೆಯ ಉಪ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಉಚಿತ ನೇತ್ರ ಶಸ್ತ್ರ ಚಿಕಿತ್ಸಾ ಶಿಬಿರ

■ವಿಜಯಸಾಕ್ಷಿ ಸುದ್ದಿ, ಗದಗ

ರೋಟರಿ ಕ್ಲಬ್ ಗದಗ-ಬೆಟಗೇರಿ ವೆಲ್‌ಫೇರ್ ಸೊಸೈಟಿ (ಜಿಲ್ಲಾ ಸ್ಟೇಡಿಯಂ ಹತ್ತಿರ) ಹಾಗೂ ಇನ್ನರ್ ವ್ಹೀಲ್ ಕ್ಲಬ್ ಆಫ್ ಮಿಡ್‌ಟೌನ್ ಗದಗ ಇವರ ಸಹಯೋಗದಲ್ಲಿ ಉಚಿತ ನೇತ್ರ ತಪಾಸಣೆ ಹಾಗೂ ಶಸ್ತ್ರ ಚಿಕಿತ್ಸಾ ಶಿಬಿರವನ್ನು ಜಿಲ್ಲಾ ಕ್ರೀಡಾಂಗಣದ ಹತ್ತಿರದ ರೋಟರಿ ಐ ಕೇರ್ ಸೆಂಟರ್‌ನಲ್ಲಿ ಏರ್ಪಡಿಸಲಾಗಿದೆ.

ಶಿಬಿರವನ್ನು ನಿವೃತ್ತ ಎಸ್.ಪಿ. ದಿ. ಎಸ್.ಎಸ್. ಹಸಬಿ ಮತ್ತು ದಿ. ಶ್ರೀಮತಿ ಪಾರ್ವತೆಮ್ಮ ಎಸ್.ಹಸಬಿ ಇವರ ಸ್ಮರಣಾರ್ಥ ಡಾ. ಸಿ.ಎಸ್. ಹಸಬಿ, ಹಾಗೂ ಗೀತಾ ಭಿಕ್ಷಾವತಿಮಠ ಇವರ ಪ್ರಾಯೋಜಕತ್ವದಲ್ಲಿ ಮಾ.21ರಂದು ಸಾಯಂಕಾಲ 5 ಗಂಟೆಗೆ ತಪಾಸಣೆ ಹಾಗೂ ಮಾ. 22ರಂದು ಕಣ್ಣಿನ ಪೊರೆಯ ಶಸ್ತ್ರ ಚಿಕಿತ್ಸೆಯನ್ನು ಕೈಗೊಳ್ಳಲಾಗುವುದು. ತಪಾಸಣೆಗೆ ಬರುವ ರೋಗಿಗಳು ತಮ್ಮ ಆಧಾರ ಕಾರ್ಡಿನ ಝರಾಕ್ಸ್ ಪ್ರತಿಯನ್ನು ಕಡ್ಡಾಯವಾಗಿ ತರಬೇಕು.

ಬ್ಲಡ್ ಪ್ರೆಶರ್ ಹಾಗೂ ಸಕ್ಕರೆ ಕಾಯಿಲೆ ಇದ್ದವರಿಗೆ ಅವುಗಳು ನಿಯಂತ್ರಣಕ್ಕೆ ಬರದ ಹೊರತು ಆಪರೇಶನ್ ಮಾಡಲಾಗುವುದಿಲ್ಲ. ಕಣ್ಣಿನ ಪೊರೆ ಬಂದ ರೋಗಿಗಳು ತಮ್ಮ ಹೆಸರನ್ನು ರೋಟರಿ ಐ ಕೇರ್ ಸೆಂಟರ್‌ನಲ್ಲಿ ನೊಂದಾಯಿಸಬೇಕೆಂದು ಸಂಸ್ಥೆಯ ಅಧ್ಯಕ್ಷ ರೋ. ಇಂ. ಶ್ರೀಧರ ಎನ್.ಸುಲ್ತಾನಪೂರ ಹಾಗೂ ಕಾರ್ಯದರ್ಶಿ ರೋ. ಇಂ.ಬಾಲಕೃಷ್ಣ ಕಾಮತ ಸಾರ್ವಜನಿಕರಲ್ಲಿ ವಿನಂತಿಸಿದ್ದಾರೆ.

## ರಾಜು ಭೂಶೆಟ್ಟಿಯವರ ಚಿಂತನ ನಾಳೆ

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಮಾರ್ಚ್ 22ರಂದು ವಿಶ್ವ ಜಲದಿನವನ್ನು ಆಚರಿಸುತ್ತಿರುವ ಸಂದರ್ಭದಲ್ಲಿ ನೀರಿನ ಕುರಿತು ವಿಜ್ಞಾನ ಸಂವಹನಕಾರರಾದ ರಾಜು ಭೂಶೆಟ್ಟಿಯವರ ಚಿಂತನ ಕಾರ್ಯಕ್ರಮವು ಧಾರವಾಡ ಆಕಾಶವಾಣಿಯಲ್ಲಿ ಬೆಳಿಗ್ಗೆ 6.25ಕ್ಕೆ ಪ್ರಸಾರವಾಗಲಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.



## ರಾಷ್ಟ್ರೀಯ ಮೆಗಾ ಲೋಕ ಅದಾಲತ್ ಯಶಸ್ವಿ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಮಾರ್ಚ್ 16 ರಂದು ರಾಜ್ಯಾದ್ಯಂತ ನಡೆದ ರಾಷ್ಟ್ರೀಯ ಮೆಗಾ ಲೋಕ ಅದಾಲತ್ ಒಂದೇ ದಿನದಲ್ಲಿ ಸೌಹಾರ್ದಯುತವಾಗಿ 29 ಲಕ್ಷ ಪ್ರಕರಣಗಳನ್ನು ಇತ್ಯರ್ಥಪಡಿಸಿದೆ. ಇದರಲ್ಲಿ ವಿವಿಧ ನ್ಯಾಯಾಲಯಗಳಲ್ಲಿ ಬಾಕಿ ಇರುವ 2.52 ಲಕ್ಷ ಪ್ರಕರಣಗಳು ಮತ್ತು 26.48 ಲಕ್ಷ ವ್ಯಾಜ್ಯ ಪೂರ್ವ ಪ್ರಕರಣಗಳು ಸೇರಿವೆ.

ಲಯನ್ಸ್ ಕ್ಲಬ್‌ನಲ್ಲಿ ಮಹಿಳಾ ದಿನಾಚರಣೆ । ಸಾಧಕ ಮಹಿಳೆಯರಿಗೆ ಗೌರವ

# ಮಹಿಳೆ ಎಲ್ಲ ಕ್ಷೇತ್ರಗಳಲ್ಲಿ ಮುನ್ನಡೆ ಸಾಧಿಸಿದ್ದಾಳೆ



**■ವಿಜಯಸಾಕ್ಷಿ ಸುದ್ದಿ, ಗದಗ**

ಇಂದಿನ ಆಧುನಿಕ ದಿನಗಳಲ್ಲಿ ಮಹಿಳೆ ಎಲ್ಲ ಕ್ಷೇತ್ರಗಳಲ್ಲಿ ಮುನ್ನಡೆ ಸಾಧಿಸಿದ್ದಾಳೆ. ಮಹಿಳೆ ಇಂದು ವಿಜ್ಞಾನ-ತಂತ್ರಜ್ಞಾನ, ವೈದ್ಯಕೀಯ, ಶಿಕ್ಷಣ, ಕೃಷಿ, ರಾಜಕೀಯ, ಉದ್ಯಮ ಮುಂತಾದ ಕ್ಷೇತ್ರದಲ್ಲಿ ಪುರುಷರಿಗೆ ಸಮನಾಗಿ, ಇನ್ನೂ ಒಂದು ಹೆಜ್ಜೆ ಮುನ್ನಡೆ ಸಾಧಿಸಿದ್ದಾಳೆ. ಕುಟುಂಬದಲ್ಲಿ ಪ್ರೋತ್ಸಾಹ, ಸಾಧಿಸಬೇಕೆಂಬ ಛಲ, ಅವಕಾಶಗಳು, ಶಿಕ್ಷಣ ಮತ್ತು ಮೀಸಲಾತಿಯು ಎತ್ತರದ ಸ್ಥಾನವನ್ನು ತಲುಪಿಸಿ ಸಾಧಕ ಮಹಿಳೆಯನ್ನಾಗಿ ಮಾಡಿವೆ ಎಂದು ಲಯನ್ಸ್ ಕ್ಲಬ್‌ನ ಮಾಜಿ ಜಿಲ್ಲಾ ಗವರ್ನರ್ ಎಂ.ಜೆ.ಎಫ್ ಆನಂದ ಪೋತ್ನೀಸ್ ಅಭಿಪ್ರಾಯಪಟ್ಟರು.

ಅವರು ನಗರದ ಲಯನ್ಸ್ ಕ್ಲಬ್ ಸಭಾಂಗಣದಲ್ಲಿ ಗದಗ-ಬೆಟಗೇರಿ ಲಯನ್ಸ್ ಕ್ಲಬ್ ಏರ್ಪಡಿಸಿದ್ದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಮಾತನಾಡಿದರು.

ಸೌಭಾಗ್ಯ ಮಹಿಳಾ ಬ್ಯಾಂಕ್‌ನ ಚೇರಮನ್ ವೀಣಾ ಪೋತ್ನೀಸ್ ಅವರು ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟನೆ ನೆರವೇರಿಸಿ ಸಂದರ್ಭೋಚಿತವಾಗಿ ಮಾತನಾಡಿದರು. ಸಾಧಕ ಮಹನೀಯರನ್ನು ಅಶ್ವಿನಿ ನೀಲಗುಂದ, ಅನಿತಾ ಹೆಬಸೂರ, ಮಂಜುಳಾ ಶಿವಪ್ಪಗೌಡ್ರ, ರೂಪಾ ಉತ್ತರಕರ, ವೀಣಾ ಸುಲಾಖೆ, ವಿಜಯಲಕ್ಷ್ಮೀ ಹೊಳಗುಂದಿ, ಅಪರ್ಣಾ ತೋಟದ ಪರಿಚಯಿಸಿದರು.

ವೇದಿಕೆಯ ಮೇಲೆ ಗದಗ-ಬೆಟಗೇರಿ ಲಯನ್ಸ್ ಕ್ಲಬ್ ಅಧ್ಯಕ್ಷ ರಮೇಶ ಶಿಗ್ಲಿ, ಕಾರ್ಯದರ್ಶಿ ಪ್ರವೀಣ ವಾರಕರ, ಖಜಾಂಚಿ ರಾಜು ಮಲ್ಲಾಡದ, ಸುರೇಖಾ ಮಲ್ಲಾಡದ ಉಪಸ್ಥಿತರಿದ್ದರು.

ಸಮಾರಂಭದ ಅಧ್ಯಕ್ಷತೆಯನ್ನು ಗದಗ-ಬೆಟಗೇರಿ ಲಯನ್ ಲೇಡಿಸ್ ಕ್ಲಬ್‌ನ ಅಧ್ಯಕ್ಷೆ ಸಾವಿತ್ರಿ ಶಿಗ್ಲಿ ವಹಿಸಿ ಸರ್ವರನ್ನು ಸ್ವಾಗತಿಸಿದರು. ಕ್ಷಿತಿಜ್ ಸುಲಾಖೆ ಪ್ರಾರ್ಥಿಸಿದರು. ಲಯನ್ ಲೇಡಿಸ್ ಕ್ಲಬ್‌ನ ಕಾರ್ಯದರ್ಶಿ ಅಮೃತಾ ವಾರಕರ್ ನಿರೂಪಿಸಿ ವಂದಿಸಿದರು.

ಕಾರ್ಯಕ್ರಮದಲ್ಲಿ ಕ್ಲಬ್‌ನ ಸರ್ವ ಪದಾಧಿಕಾರಿಗಳು, ಸದಸ್ಯರು ಹಾಗೂ ಗಣ್ಯರು ಪಾಲ್ಗೊಂಡಿದ್ದರು.

> ಸಮಾರಂಭದಲ್ಲಿ ಸಾಧಕ ಮಹಿಳೆಯರಾದ ಮಂಗಳಾ ನೀಲಗುಂದ(ಕೃಷಿ) ಡಾ.ಅನುಪಮಾ ಪಾಟೀಲ(ವೈದ್ಯಕೀಯ), ಕವಿತಾ ಬೇಲೇರಿ(ವಿಕಲಚೇತನ ಮಕ್ಕಳ ಸೇವೆ), ಗಿರಿಜಾ ಬೇವಿನಕಟ್ಟಿ(ಶಿಕ್ಷಣ), ವೀಣಾ ಪೋತ್ನೀಸ್(ಬ್ಯಾಂಕಿಂಗ್), ಸಂಜನಾ ಚಿಕ್ಕನಗೌಡ್ರ(ಕ್ರೀಡೆ), ನೇತ್ರಾ ಸುಲ್ತಾನಪೂರ(ಪ್ರತಿಭಾನ್ವಿತ ವಿದ್ಯಾರ್ಥಿನಿ) ಇವರುಗಳನ್ನು ಸನ್ಮಾನಿಸಲಾಯಿತು.

ಹೋಳಿ ಹಬ್ಬದ ಆಚರಣೆ ಕುರಿತು ನಡೆದ ಶಾಂತಿ ಸಭೆಯಲ್ಲಿ ಪಿಎಸ್‌ಐ ಶಿವಾನಂದ ಬನ್ನಿಕೊಪ್ಪ

# ಹೋಳಿ ಹಬ್ಬವನ್ನು ಶಾಂತಿಯಿಂದ ಆಚರಿಸಿ



**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಮಾ. 26ರಂದು ನರೇಗಲ್ಲ ಮತ್ತು ಸುತ್ತಲಿನ ಗ್ರಾಮಗಳಲ್ಲಿ ಆಚರಿಸಲಾಗುತ್ತಿರುವ ಹೋಳಿ ಹಬ್ಬವನ್ನು ಅತ್ಯಂತ ಶಾಂತ ರೀತಿಯಿಂದ ಆಚರಿಸಬೇಕು. ಯಾವುದೇ ಅಹಿತಕರ ಘಟನೆಗಳಿಗೆ ಅವಕಾಶ ನೀಡಬಾರದು. ಒಂದು ವೇಳೆ ಅಹಿತಕರ ಘಟನೆಗಳು ಸಂಭವಿಸಿದರೆ ಶಿಸ್ತಿನ ಕ್ರಮ ಜರುಗಿಸಲಾಗುವುದು ಎಂದು ನರೇಗಲ್ಲ ಪೊಲೀಸ್ ಠಾಣೆಯ ಪಿಎಸ್‌ಐ ಶಿವಾನಂದ ಬನ್ನಿಕೊಪ್ಪ ಹೇಳಿದರು.

ಪಟ್ಟಣದ ಪೊಲೀಸ್ ಠಾಣೆಯಲ್ಲಿ ಹೋಳಿ ಹಬ್ಬದ ಆಚರಣೆ ಕುರಿತು ನಡೆದ ಶಾಂತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಈಗ ಲೋಕಸಭಾ ಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿದೆ. ಈ ಸಂದರ್ಭದಲ್ಲಿ ಯಾವುದೇ ರಾಜಕೀಯ ನಾಯಕರನ್ನು ಕರೆಯಿಸಿ ರಾಜಕೀಯ ಭಾಷಣ ಮಾಡಿಸಬಾರದು. ಅವರಿಂದ ಯಾವುದೇ ರೀತಿಯ ಧನ ಸಂಗ್ರಹವನ್ನೂ ಮಾಡಬಾರದು. ಸಾಮಾಜಿಕ ಜಾಲತಾಣಗಳಲ್ಲಿ ಯಾವುದೇ ರಾಜಕೀಯ ವಿಷಯಗಳನ್ನು ಅಥವಾ ಇನ್ನೊಂದು ಧರ್ಮದ ವ್ಯಕ್ತಿಗಳಿಗೆ ನೋವುಂಟು ಮಾಡುವಂತಹ, ಭಾವನೆಗಳಿಗೆ ಧಕ್ಕೆ ತರುವಂತಹ ಸಂಗತಿಗಳನ್ನು ಯಾವುದೇ ಕಾರಣಕ್ಕೂ ಹಂಚಿಕೊಳ್ಳಬಾರದು ಎಂದು ತಿಳಿಸಿದರು.

ಹೋಳಿ ಆಡುವಾಗ ಕಡ್ಡಾಯವಾಗಿ ಎಲ್ಲರೂ ಪುಡಿ ಬಣ್ಣವನ್ನು ಮಾತ್ರ ಬಳಸಬೇಕು. ಇತರೆ ರಾಸಾಯನಿಕ ಬಣ್ಣಗಳನ್ನು, ದೇಹಕ್ಕೆ ಹಾನಿ ಮಾಡುವಂತಹ ಬಣ್ಣಗಳನ್ನು ಬಳಕೆ ಮಾಡಿದರೆ ಅವರ ಮೇಲೆ ಸೂಕ್ತ ಕ್ರಮ ಜರುಗಿಸಲಾಗುವದು. ಸಾರ್ವಜನಿಕರ ಆಸ್ತಿ-ಪಾಸ್ತಿಗಳನ್ನು ಕಳುವು ಮಾಡುವವರಿಗೆ ಕಠಿಣ ಶಿಕ್ಷೆ ಕಾದಿದೆ. ನಿಮ್ಮ ಓಣಿಯ ಮಕ್ಕಳಿಗೂ ಇದನ್ನು ತಿಳಿ ಹೇಳಿ, ಹೋಳಿ ಹಬ್ಬವು ಶಾಂತ ರೀತಿಯಿಂದ ನಡೆಯಲು ಎಲ್ಲರೂ ಸಹಕಾರ ನೀಡಬೇಕೆಂದು ಶಿವಾನಂದ ಬನ್ನಿಕೊಪ್ಪ ಹೇಳಿದರು.

ಶಾಂತಿ ಸಭೆಯನ್ನುದ್ದೇಶಿಸಿ ನಿವೃತ್ತ ಶಿಕ್ಷಕ ಎಂ.ಎಸ್. ದಢೇಸೂರಮಠ, ಮುಖಂಡ ಶಶಿಧರ ಸಂಕನಗೌಡ್ರ, ಅಬ್ಬಿಗೇರಿಯ ಹನುಮಂತಪ್ಪ ದ್ವಾಸಲ, ನಿವೃತ್ತ ಮುಖ್ಯ ಶಿಕ್ಷಕ ಅರುಣ ಕುಲಕರ್ಣಿ, ಪ.ಪಂ ಸದಸ್ಯ ಕುಮಾರಸ್ವಾಮಿ ಕೋರಧಾನ್ಯಮಠ ಮುಂತಾದವರು ಮಾತನಾಡಿ, ಪಟ್ಟಣದಲ್ಲಿ ಮತ್ತು ಸಂಬಂಧಿತ ಗ್ರಾಮಗಳಲ್ಲಿ ಹೋಳಿ ಹಬ್ಬವನ್ನು ಶಾಂತಿಯುತವಾಗಿ ಆಚರಿಸಲು ಇಲಾಖೆಯೊಂದಿಗೆ ಸಹಕರಿಸುವುದಾಗಿ ಹೇಳಿದರು.

ಸಭೆಯಲ್ಲಿ ಎಎಸ್‌ಐ ಕೆ.ಆರ್. ಬೇಲೇರಿ, ಜಿ.ಬಿ. ಕೊತಬಾಳ, ಜಿ.ಕೆ. ದಿಂಡೂರ, ಚಂದ್ರು ರಾಠೋಡ, ಎಂ.ಕೆ. ಗುಂಡಗೋಪುರಮಠ, ಎಸ್. ಎಸ್. ಹುನಗುಂದ, ವೀರಣ್ಣ ಮಾವಿನಕಾಯಿ, ಈರಪ್ಪ ಜೋಗಿ, ಮುತ್ತಪ್ಪ ನುಲ್ಕಿ, ಕೆ.ಬಿ. ರೋಣದ, ಹಸನಸಾಬ ಕೊಪ್ಪದ, ರಮೇಶ ಕಲ್ಲೂರ, ರಾಜೇಸಾಬ ನಶೇಖಾನ, ಹುಲಗಪ್ಪ ಬಂಡಿವಡ್ಡರ, ಕೃಷ್ಣಪ್ಪ ಜುಟ್ಲ, ಅಲ್ತಾಫ್ ಬಾಬಣ್ಣವರ, ಮಂಜುನಾಥ ಕಮಲಾಪುರ, ದೊಡ್ಡನಗೌಡ ಕೊತಬಾಳ, ಇಮ್ರಾನ್ ಮಕಾನದಾರ ಮುಂತಾದವರು ಉಪಸ್ಥಿತರಿದ್ದರು.

> ಮಾ.25ರಿಂದ ಎಸ್‌ಎಸ್‌ಎಲ್‌ಸಿ ಪರೀಕ್ಷೆಗಳು ಪ್ರಾರಂಭವಾಗುತ್ತಿದ್ದು, ಆ ಸಮಯದಲ್ಲಿ ವಿದ್ಯಾರ್ಥಿಗಳಿಗೆ ತೊಂದರೆಯಾಗದಂತೆ ನೋಡಿಕೊಳ್ಳಬೇಕು. ಡಿಜೆಗಳನ್ನು ಹಚ್ಚಿ ಕುಣಿಯುವಂತಿಲ್ಲ, ರಾಜಕೀಯ ಪಕ್ಷಗಳ ಯಾವುದೇ ಚಿನ್ಹೆಗಳನ್ನು ಪ್ರದರ್ಶಿಸುವಂತಿಲ್ಲ. ಇವುಗಳನ್ನು ಏನಾದರೂ ಉಲ್ಲಂಘಿಸಿದರೆ ಅಂಥವರು ಕಠಿಣ ಶಿಕ್ಷೆಗೆ ಗುರಿಯಾಗುತ್ತಾರೆ. ಹೋಳಿ ಹಬ್ಬದ ಸಂದರ್ಭದಲ್ಲಿ ಆಯಾ ಓಣಿಯ, ಆಯಾ ಗ್ರಾಮಗಳ ಹಿರಿಯರ ಪಾತ್ರ ಮಹತ್ವದ್ದಾಗಿದ್ದು, ಶಾಂತಿ-ಸುವ್ಯವಸ್ಥೆ ಕಾಪಾಡಲು ಅವರೆಲ್ಲರ ಸಹಕಾರ ಇಲಾಖೆಗೆ ಅಗತ್ಯವಾಗಿದೆ ಎಂದು ಪಿಎಸ್‌ಐ ಶಿವಾನಂದ ಬನ್ನಿಕೊಪ್ಪ ತಿಳಿಸಿದರು.

# ಮತದಾನ ಜಾಗೃತಿ ಕಾರ್ಯಕ್ರಮ



**■ವಿಜಯಸಾಕ್ಷಿ ಸುದ್ದಿ, ಗದಗ**

ಇಲ್ಲಿನ ವಿ.ಪಿ. ಗಾಲಾ ಇನ್ಸ್ಟಿಟ್ಯೂಟ್ ಆಫ್ ಪ್ಯಾರಾಮೆಡಿಕಲ್ ಸೈನ್ಸ್ ಕಾಲೇಜಿನಲ್ಲಿ ಮತದಾನ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮದಲ್ಲಿ ಕಾಲೇಜಿನ ಅಧ್ಯಕ್ಷೆ ರಚನಾ ಗಾಲಾ, ಸೆಕ್ರೆಟರಿ ಪಂಕಜ್ ಗಾಲಾ, ನಿರ್ದೇಶಕರಾದ ಗುಂಜನ ಗಾಲಾ, ಪ್ರಾಂಶುಪಾಲ ಅಮರಯ್ಯ ಚಿನ್ನಯ್ಯನಮಠ ಪಾಲ್ಗೊಂಡಿದ್ದರು.

ಪ್ರಾಂಶುಪಾಲ ಅಮರಯ್ಯ ಚಿನ್ನಯ್ಯನಮಠ ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಿ, ದೇಶದ ಬೆಳವಣಿಗೆ ಮತ್ತು ಭವಿಷ್ಯದ ದೃಷ್ಟಿಯಿಂದ ಮತದಾರರ ಪಾತ್ರ ಮುಖ್ಯವಾಗಿದೆ. ಪ್ರಜಾಪ್ರಭುತ್ವದ ವ್ಯವಸ್ಥೆ ಉಳಿಯಲು ಮತದಾನ ಮಹತ್ವದ್ದಾಗಿದೆ. ಜಗತ್ತಿನಲ್ಲಿಯೇ ಅತಿದೊಡ್ಡ ಸಂವಿಧಾನ ಹೊಂದಿರುವ ಭಾರತದಲ್ಲಿ ಚುನಾವಣೆಯ ಪಾತ್ರ ಹಿರಿದು. ಪ್ರತಿ ವಿದ್ಯಾರ್ಥಿಯು ಹಳ್ಳಿಗಳಲ್ಲಿ ಮತದಾನದ ಬಗ್ಗೆ ತಿಳಿಹೇಳಬೇಕು. ಎಲ್ಲರೂ ಸಾಮಾಜಿಕವಾಗಿ ತಮ್ಮ ಕರ್ತವ್ಯನಿರ್ವಹಿಸಬೇಕು ಎಂದರು.

ಕಾರ್ಯಕ್ರಮ ದಲ್ಲಿ ಕಾಲೇಜಿನ ಎಲ್ಲ ಸಿಬ್ಬಂದಿ ವರ್ಗದವರು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಎಚ್‌ಡಿಕೆ ಆರೋಗ್ಯ ಸುಧಾರಣೆಗೆ ಜೆಡಿಎಸ್‌ನಿಂದ ಪೂಜೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಹೃದಯದ ಶಸ್ತ್ರಚಿಕಿತ್ಸೆಗಾಗಿ ಚೆನ್ನೈನ ಆಸ್ಪತ್ರೆಯಲ್ಲಿ ದಾಖಲಾಗಿರುವ ಮಾಜಿ ಮುಖ್ಯಮಂತ್ರಿ, ಜೆಡಿಎಸ್‌ನ ರಾಜ್ಯಾಧ್ಯಕ್ಷ ಎಚ್.ಡಿ. ಕುಮಾರಸ್ವಾಮಿ ಅವರು ಶೀಘ್ರ ಗುಣಮುಖರಾಗಲೆಂದು ಜೆಡಿಎಸ್ ಪಕ್ಷದ ಪದಾಧಿಕಾರಿಗಳು ರಾಜ್ಯದ ವಕ್ತಾರ ವೆಂಕನಗೌಡ ಗೋವಿಂದಗೌಡ್ರ ನೇತೃತ್ವದಲ್ಲಿ ಮಾ.21ರ ಮುಂಜಾನೆ 6 ಗಂಟೆಗೆ ನಗರದ ವೀರೇಶ್ವರ ಪುಣ್ಯಾಶ್ರಮದಲ್ಲಿ ಮೃತ್ಯುಂಜಯ ಮತ್ತು ಗಣಹೋಮ ನೆರವೇರಿಸಲಿದ್ದಾರೆ.

ಎಚ್.ಡಿ. ಕುಮಾರಸ್ವಾಮಿ ಅವರು ಶೀಘ್ರ ಗುಣಮುಖರಾಗಿ, ಆರೋಗ್ಯವಂತರಾಗಿ ಹೊರಬಂದು ಪಕ್ಷವನ್ನು ಮತ್ತೆ ಅಧಿಕಾರಕ್ಕೆ ತರುವ ಶಕ್ತಿ ಆ ಭಗವಂತ ನೀಡಲೆಂದು ಪ್ರರ್ಥಿಸಿ ಪಕ್ಷದ ಪದಾಧಿಕಾರಿಗಳು, ಸದಸ್ಯರು ಈ ಹೋಮದಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ಜೆಡಿಎಸ್ ಪಕ್ಷದ ರಾಜ್ಯ ವಕ್ತಾರ ವೆಂಕನಗೌಡ ಆರ್. ಗೋವಿಂದಗೌಡ್ರ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಗವಿಸಿದ್ದೇಶ್ವರ ಮಠದ ರೊಟ್ಟಿ ಜಾತ್ರಾ ಮಹೋತ್ಸವದ ಧರ್ಮಸಭೆಯಲ್ಲಿ ಹಿರಿಯ ನಟ ದೊಡ್ಡಣ್ಣ

# ಮಠಗಳು ಶ್ರೇಯೋಭಿವೃದ್ಧಿಗೆ ಮೂಲಾಧಾರ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಜಾತ್ರೆ, ಹಬ್ಬ-ಹರಿದಿನ, ಉತ್ಸವಗಳು, ಧರ್ಮಸಭೆಗಳು ಪರಸ್ಪರರಲ್ಲಿ ಸ್ನೇಹ, ಬಾಂಧವ್ಯ, ಸೌಹಾರ್ದತೆ ಬೆಸೆಯುತ್ತವೆ. ಪ್ರಸ್ತುತ ತಾಂತ್ರಿಕ ಜಮಾನಾದಲ್ಲಿಯೂ ಇಂತಹ ಸಾಂಪ್ರದಾಯಿಕ ಆಚರಣೆಗಳು ವಿಜೃಂಭಿಸುವ ಅಗತ್ಯವಿದೆ ಎಂದು ಹಿರಿಯ ನಟ ದೊಡ್ಡಣ್ಣ ಹೇಳಿದರು.

ಅವರು ತಾಲೂಕಿನ ಆದ್ರಳ್ಳಿ ಗ್ರಾಮದ ಗವಿಸಿದ್ದೇಶ್ವರ ಮಠದ ರೊಟ್ಟಿ ಜಾತ್ರಾ ಮಹೋತ್ಸವ ಅಂಗವಾಗಿ ನಡೆದ ಧರ್ಮಸಭೆಯಲ್ಲಿ ಮಾತನಾಡಿ, ಜಾತ್ರೆಗಳ ಆಚರಣೆಯ ಸಂದರ್ಭದಲ್ಲಿ ಮಠಮಾನ್ಯಗಳು ಆಚರಿಸಿಕೊಂಡು ಬರುತ್ತಿರುವ ಧಾರ್ಮಿಕ, ಸಾಮಾಜಿಕ ಕಾರ್ಯಗಳು ಸಮಾಜದ ಸ್ವಾಸ್ಥ್ಯಕ್ಕೆ, ಶ್ರೇಯೋಭಿವೃದ್ಧಿಗೆ ಮೂಲಾಧಾರವಾಗಿದೆ. ಧರ್ಮ, ಸಂಸ್ಕೃತಿ, ಶಿಕ್ಷಣ, ಆಚಾರ-ವಿಚಾರ, ಮೌಲ್ಯಗಳನ್ನು ಬಿತ್ತುವ ಮೂಲಕ ಸಾಮಾಜಿಕ ಪ್ರಗತಿಯಲ್ಲಿ ಮಠಮಾನ್ಯಗಳ ಪಾತ್ರ ಮಹತ್ವದ್ದಾಗಿದೆ. ಮಠಮಾನ್ಯಗಳ ಈ ಕಾರ್ಯಕ್ಕೆ ಯುವಕರು ಕೈ ಜೋಡಿಸಬೇಕು. ತಾಯಂದಿರು ಮಕ್ಕಳಿಗೆ ಬಾಲ್ಯದಲ್ಲಿಯೇ ಶಿಕ್ಷಣದೊಂದಿಗೆ ಸಂಸ್ಕಾರ, ಬದುಕಿನ ಮೌಲ್ಯಗಳು, ಗುರು-ಹಿರಿಯರ ಬಗ್ಗೆ ಗೌರವ ಭಾವನ ಮೂಡಿಸಬೇಕು ಎಂದರು.

ಸವಣೂರಿನ ದೊಡ್ಡಹುಣ ಸೇಮಠದ ಚನ್ನಬಸವ ಮಹಾಸ್ವಾಮಿಗಳು ಮಾತನಾಡಿ, ನಾಡಿನ ಐತಿಹಾಸಿಕ ಪರಂಪರೆಯಲ್ಲಿ ಸಾಧು-ಸಂತರು, ಶರಣರು, ಋಷಿಮುನಿಗಳು, ಮಠಾಧೀಶರು ತಮ್ಮ ತಪಃಶಕ್ತಿ, ಸಂಕಲ್ಪ, ಜ್ಞಾನ, ಅನುಭಾವಗಳಿಂದ ಸಮಾಜಸೇವೆ, ತ್ರಿವಿಧ ದಾಸೋಹದ ಮೂಲಕ ಲೋಕ ಕಲ್ಯಾಣಕ್ಕಾಗಿ ಸಮರ್ಪಿಸಿಕೊಂಡಿದ್ದಾರೆ. ಗ್ರಾಮೀಣ ಪ್ರದೇಶಗಳು ದೇಶದ ಸಂಸ್ಕೃತಿಯ ಜೀವಾಳವೇ ಆಗಿವೆ. ದೇಶದ ಸಂಪತ್ತಾದ ಯುವಕರು ವೀರ ಸನ್ಯಾಸಿ ಸ್ವಾಮಿ ವಿವೇಕಾನಂದರನ್ನು ಆದರ್ಶವಾಗಿಟ್ಟುಕೊಂಡು ದುಶ್ಚಟಗಳಿಂದ ನಮ್ಮ ದೇಶದ ಧರ್ಮ, ಸಂಸ್ಕೃತಿ, ಪರಂಪರೆಗಳನ್ನು ಮುಂದುವರೆಸಿಕೊಂಡು ಹೋಗುವ ಕಾರ್ಯ ಮಾಡಬೇಕು. ಮಕ್ಕಳಷ್ಟೇ ಅಲ್ಲ ದೊಡ್ಡವರೂ ಮೊಬೈಲ್, ಟಿವಿಗಳ ದುರಭ್ಯಾಸದಿಂದ ಹೊರ ಬರದಿದ್ದರೆ ಬದುಕು ಹಾಳಾಗುತ್ತದೆ. ಮಕ್ಕಳಿಗೆ ಬಾಲ್ಯದಲ್ಲಿಯೇ ದೇವರು, ಧರ್ಮ, ಮಠ ಮಾನ್ಯಗಳ ಬಗ್ಗೆ ಪೂಜ್ಯನೀಯ ಭಾವನೆ, ನಂಬಿಕೆ, ಶ್ರದ್ಧೆ, ಭಕ್ತಿ ಮೂಡಿಸಬೇಕು ಎಂದರು.

ಮುರಘಾಮಠದ ಡಾ. ಮಲ್ಲಿಕಾರ್ಜುನ ಮಹಾಸ್ವಾಮಿಗಳು, ಬೈಲೂರಿನ ನಿಜಗುಣಾನಂದ ಸ್ವಾಮಿಗಳು, ಹತ್ತಿಮತ್ತೂರಿನ ನಿಜಗುಣ ಶಿವಯೋಗಿಗಳು, ಅಗಡಿ ಅಕ್ಕಿಮಠದ ಡಾ.ಗುರುಲಿಂಹ ಮಹಾಸ್ವಾಮಿಗಳು, ತಿಪ್ಪಾಯಿಕೊಪ್ಪದ ಮಹಾಂತಸ್ವಾಮಿಗಳು, ಕೈಲಾಸಪತಿ ಮಹಾರಾಜರು, ನಾಗರಾಜ ಮಹಾರಾಜರು, ಉಪಸಭಾಪತಿಗಳಾದ ರುದ್ರಪ್ಪ ಲಮಾಣಿ, ರಾಮಣ್ಣ ಲಮಾಣಿ, ಆನಂದಸ್ವಾಮಿ ಗಡ್ಡದೇವರಮಠ, ಶಾರದಾ ಪೂರ್ಣಾನಾಯಕ, ಗವಿಸಿದ್ದಪ್ಪ ದ್ಯಾಮಣ್ಣವರ, ರವಿ ಪೂಜಾರ, ಯು.ಬಿ ಬಣಕಾರ,ದೇವಪ್ಪ ಲಮಾಣಿ, ಹೊನ್ನಪ್ಪ ವಡ್ಡರ, ಶೇಖಪ್ಪ ಲಮಾಣಿ, ಪರಶುರಾಮ ನಾಯಕ ಸೇರಿ ಅನೇಕರಿದ್ದರು.

ಬಳಿಕ ಗಾಯಕ ರಮೇಶ ಲಮಾಣಿ, ಸೌಮ್ಯ ಕೆಂಪಣ್ಣವರ ಸೇರಿ ಕಲಾ ತಂಡಗಳಿಂದ ಸಾಂಸ್ಕೃತಿಕಕ ಕಾರ್ಯಕ್ರಮಗಳು ಜರುಗಿದವು. ಬುಧವಾರ ಸಂಜೆ ಕಡುಬಿನ ಕಾಳಗ ಜರುಗಿತು. ಮಾ.21ರಂದು ಮಧ್ಯಾಹ್ನ 3ಕ್ಕೆ ಕುಸ್ತಿ ಪಂದ್ಯಾವಳಿಗಳು ಜರುಗಲಿವೆ.

> ಆದ್ರಳ್ಳಿ ಗವಿಮಠದ ಕುಮಾರ ಮಹಾರಾಜರ ನೇತೃತ್ವದಲ್ಲಿ ಮೌನತಪಸ್ವಿ ಶ್ವೇತಶಾಂತ ಜಡೆಯ ಶಾಂತಲಿಂಗೇಶ್ವರ ಮಹಾಸ್ವಾಮಿಗಳ ನಾಣ್ಯ ತುಲಾಭಾರ, ಪಲ್ಲಕ್ಕಿ ಉತ್ಸವ ಬಳಿಕ ರಥೋತ್ಸವ ಅನೇಕ ಮಠಾಧೀಶರು, ಗಣ್ಯರು, ಅಪಾರ ಭಕ್ತ ಸಮೂಹದ ನಡುವೆ ನೆರವೇರಿತು. ಮುಂದಿನ ವರ್ಷ ನಡೆಯುವ ಶ್ರೀಮಠದ ಕುಮಾರ ಮಹಾರಾಜರ ಪಟ್ಟಾಧಿಕಾರ ಮಹೋತ್ಸವದ ಭಿತ್ತಿಪತ್ರಗಳನ್ನು ಬಿಡುಗಡೆಗೊಳಿಸಲಾಯಿತು.

ಗದಗ ಪಂಚಮಸಾಲಿ ಮಹಿಳಾ ಘಟಕದಿಂದ ಮಹಿಳಾ ದಿನಾಚರಣೆ, ಸನ್ಮಾನ

# ಮಹಿಳಾ ಸುರಕ್ಷತೆ ಅತ್ಯಗತ್ಯ



**■ವಿಜಯಸಾಕ್ಷಿ ಸುದ್ದಿ, ಗದಗ**

ಇಂದಿನ ದಿನಮಾನಗಳಲ್ಲಿ ಮಹಿಳೆಯರು ಎಲ್ಲ ಕ್ಷೇತ್ರಗಳಲ್ಲಿ ಕಾರ್ಯ ನಿರ್ವಹಿಸುತ್ತಿದ್ದರೂ ಅವಳಿಗೆ ಅಭದ್ರತೆ ಕಾಡುತ್ತಿದೆ. ಮಹಿಳಾ ಸುರಕ್ಷತೆಯು ಅತ್ಯಗತ್ಯವಾಗಿದೆ ಎಂದು ಹಿರಿಯರಾದ ನೀಲಮ್ಮ ಹುಣಶೀಕಟ್ಟಿ ಹೇಳಿದರು.

ಅವರು ನಗರದ ಹಾಲಕೇರಿ ಶಾಖಾ ಮಠದಲ್ಲಿ ಗದಗ ಪಂಚಮಸಾಲಿ ಸಮಾಜದ ಮಹಿಳಾ ಘಟಕ ಏರ್ಪಡಿಸಿದ್ದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಹಾಗೂ ಸಮಾಜದ ಸಾಧಕ ಮಹಿಳೆಯರಿಗೆ ಸನ್ಮಾನ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.

ಮೂಲತಃ ಪಂಚಮಸಾಲಿ ಸಮುದಾಯದವರು ಒಕ್ಕಲಿಗರು, ರೈತಾಪಿ ಬದುಕನ್ನು ನಡೆಸುತ್ತ ಇಂದು ದೊಡ್ಡ ದೊಡ್ಡ ಉದ್ಯಮಿಗಳಾಗಿ, ವಿವಿಧ ಹುದ್ದೆಗಳಲ್ಲಿ ಕಾರ್ಯ ನಿರ್ವಹಿಸುತ್ತಿದ್ದು, ಶಿಕ್ಷಣಕ್ಕೂ ಹೆಚ್ಚಿನ ಒತ್ತು ನೀಡಬೇಕೆಂದರು.

ಮುಖ್ಯ ಅತಿಥಿಯಾಗಿ ಆಗಮಿಸಿದ್ದ ಕಸ್ತೂರಿ ದಾನಪ್ಪಗೌಡ್ರ ಮಾತನಾಡಿ, ಮಹಿಳೆಯರು ಮಾಡುವ ಕೆಲಸದಲ್ಲಿ ಕಾಯಕ ನಿಷ್ಠರು. ಹೀಗಾಗಿ ಹಠ ಬಿಡದಂತೆ ಅವರು ಕೈಗೊಳ್ಳುವ ಎಲ್ಲ ಕೆಲಸ ಕಾರ್ಯಗಳು ಯಶಸ್ವಿಯಾಗುತ್ತಿವೆ ಎಂದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಜಯಶ್ರೀ ಉಗಲಾಟ, ಸಮಾಜದ ಉನ್ನತಿಗಾಗಿ ನಾವೆಲ್ಲರೂ ಶ್ರಮಿಸಬೇಕಾಗಿದೆ. ಮಕ್ಕಳನ್ನು ಶೈಕ್ಷಣಿಕವಾಗಿ ಅಭಿವೃದ್ಧಿಪಡಿಸುವ ಸಲುವಾಗಿ ಯೋಜನೆಯೊಂದನ್ನು ರೂಪಿಸಿ ಅದನ್ನು ಯಶಸ್ಸುಗೊಳಿಸಲಾಗುವದು ಎಂದರು.

ಮಹಿಳೆಯರಿಗಾಗಿ ಏರ್ಪಡಿಸಿದ್ದ ವಿವಿದ ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ಬಹುಮಾನ ವಿತರಿಸಲಾಯಿತು. ಸುಮಾ ಪಾಟೀಲ ವಚನ ನೃತ್ಯ ಹಾಗೂ ಭಾರ್ಗವಿ ಪರ್ವತಗೌಡ್ರ ಕಿತ್ತೂರ ಚೆನ್ನಮ್ಮನ ಏಕಪಾತ್ರಾಭಿನಯ, ಶಾರದಾ ಕರಮುಡಿ ಅವರ ವಚನ ಗಾಯನ ಗಮನ ಸೆಳೆಯಿತು.

ವಿಜಯಶ್ರೀ ಇಳಕಲ್ಲ ಪ್ರಾರ್ಥಿಸಿದರು. ಜಯಶ್ರೀ ಪಾಟೀಲ ಸ್ವಾಗತಿಸಿದರು. ಶಿವಲೀಲಾ ಅಕ್ಕಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಜ್ಯೋತಿ ದಾನಪ್ಪಗೌಡ್ರ, ಸುಜಾತಾ ಗುಡಿಮನಿ, ಗಂಗಾ ತಂಗೂಡಿ, ದೀಪಾ ಉಗಲಾಟ ಪರಿಚಯಿಸಿದರು. ಶಾಂತಾ ತುಪ್ಪದ ನಿರೂಪಿಸಿದರು. ರೇಣುಕಾ ಅಮಾತ್ಯ ವಂದಿಸಿದರು.

ಕಾರ್ಯಕ್ರಮದಲ್ಲಿ ವಿಮಲಾ ಪರ್ವತಗೌಡ್ರ, ರೇಖಾ ಕಲ್ಲನಗೌಡ್ರ, ಶಾರದಾ ಬೊಮ್ಮಸಾಗರ, ಪ್ರೇಮಾ ಕುರಡಗಿ, ಉಮಾ ಕವಳಿಕಾಯಿ, ನಿರ್ಮಲಾ ಪಾಟೀಲ, ಲಲಿತಾ ಕುರಡಗಿ, ಜ್ಯೋತಿ ಉಗಲಾಟ, ಸುಜಾತಾ ತಂಗೂಡಿ, ನಿರ್ಮಲಾ ಮಟ್ಟಿ, ಸುಧಾ ಹುಣಶೀಕಟ್ಟಿ, ಮಂಜುಳಾ ತಂಗೂಡಿ, ಸಾಗರಿಕಾ ಅಕ್ಕಿ, ಶುಭಾ ಕುಂದಗೋಳ, ಗೀತಾ ಉಗಲಾಟ ಸೇರಿದಂತೆ ಪಂಚಮಸಾಲಿ ಮಹಿಳಾ ಘಟಕದ ಪದಾಧಿಕಾರಿಗಳು, ಸದಸ್ಯರಿದ್ದರು.

> ಇದೇ ಸಂದರ್ಭದಲ್ಲಿ ಸಮಾಜದ ಹಿರಿಯರಾದ ಪಾರ್ವತೆಮ್ಮ ಸಂಕಣ್ಣವರ, ನೀಲಮ್ಮ ಹುಣಶೀಕಟ್ಟಿ, ಕಸ್ತೂರಿ ದಾನಪ್ಪಗೌಡ್ರ, ಲಲಿತಾ ಪಾಟೀಲ ಹಾಗೂ ಸಾಧಕ ಮಹಿಳೆಯರಾದ ಕವಿತಾ ದಂಡಿನ, ವಿಜಯಲಕ್ಷ್ಮೀ ದಿಂಡೂರ, ನಾಗರತ್ನಾ ಮಾರನಬಸರಿ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

ನರಗುಂದ ವಿಧಾನಸಭಾ ಕ್ಷೇತ್ರದ ಮತಗಟ್ಟೆಗಳಿಗೆ ಇಓ ಬಿರಾದರ ಭೇಟಿ

# ಮತಗಟ್ಟೆ ಕೇಂದ್ರಗಳ ಸಿದ್ಧತೆ ಮಾಡಿಕೊಳ್ಳಿ



**■ವಿಜಯಸಾಕ್ಷಿ ಸುದ್ದಿ, ನರಗುಂದ**

ನರಗುಂದ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ನರಗುಂದ ವಿಧಾನಸಭಾ ಕ್ಷೇತ್ರದ ಮಾದರಿ ನೀತಿ ಸಂಹಿತೆಯ ನೋಡಲ್ ಅಧಿಕಾರಿಗಳಾದ ಸೋಮಶೇಖರ್ ಬಿರಾದರ ಅವರು ತಾಲೂಕಿನ ಲೋಕಸಭಾ ಚುನಾವಣೆಗಳ ಮತಗಟ್ಟೆ ಕೇಂದ್ರಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ತಾಲೂಕಿನ ಹುಣಶೀಕಟ್ಟಿ, ಕನಕಿಕೊಪ್ಪ ಹಾಗೂ ಚಿಕ್ಕನರಗುಂದ ಗ್ರಾಮ ಪಂಚಾಯತ್ ವ್ಯಾಪ್ತಿಯ ಮತಗಟ್ಟೆ ಕೇಂದ್ರಗಳಿಗೆ ಭೇಟಿ ನೀಡಿದ ಸೋಮಶೇಖರ್ ಬಿರಾದರ್, ಮತಗಟ್ಟೆ ಕೇಂದ್ರಗಳು ಸರಿಯಾದ ಗಾಳಿ ಬೆಳಕಿನ ವ್ಯವಸ್ಥೆ ಹೊಂದಿರುವುದರ ಬಗ್ಗೆ ಪರಿಶೀಲಿಸಿದರು.

ಹುಣಶೀಕಟ್ಟೆ ಗ್ರಾಮ ಪಂಚಾಯತ್ ವ್ಯಾಪ್ತಿಯ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮತಗಟ್ಟೆ ಸಂಖ್ಯೆ 145 ಮತ್ತು 146 ಕೇಂದ್ರಗಳಿಗೆ ಭೇಟಿ ನೀಡಲಾಯಿತು. ಮತಗಟ್ಟೆ ಕೇಂದ್ರಗಳಲ್ಲಿ ಮತದಾರರು ಯಾವುದೇ ಸಮಸ್ಯೆಗಳಿಲ್ಲದೆ ನಿರ್ಭೀತರಾಗಿ ತಮ್ಮ ಮತ ಚಲಾಯಿಸಲು ಸಕಲ ವ್ಯವಸ್ಥೆ ಕಲ್ಪಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಮತಗಟ್ಟೆ ಕೇಂದ್ರದ ಮುಂದೆ ರ್‍ಯಾಂಪ್ ವ್ಯವಸ್ಥೆ, ಕೇಂದ್ರದ ಒಳಗಡೆ ಫ್ಯಾನ್ ಮತ್ತು ವಿದ್ಯುತ್ ಸಂಪರ್ಕದ ವ್ಯವಸ್ಥೆ, ಚುನಾವಣೆ ಕರ್ತವ್ಯಕ್ಕೆ ಬರುವ ಅಧಿಕಾರಿಗಳು ಉಳಿದುಕೊಳ್ಳಲು ಕೊಠಡಿಯ ವ್ಯವಸ್ಥೆ, ಮತಗಟ್ಟೆ ಕೇಂದ್ರದಲ್ಲಿ ಶೌಚಾಲಯ ವ್ಯವಸ್ಥೆ, ಶೌಚಾಲಯದಲ್ಲಿ ನೀರಿನ ಸಂಪರ್ಕ, ಕುಡಿಯುವ ನೀರಿನ ವ್ಯವಸ್ಥೆ ಬಗ್ಗೆ ಖುದ್ದಾಗಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಲಾಯಿತು.

ಈ ಸಂದರ್ಭದಲ್ಲಿ ಜಗಾಪೂರ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮತಗಟ್ಟೆ ಕೇಂದ್ರ 144 ರ ಬಾಗಿಲು ದುರಸ್ಥಿಗೊಂಡಿರುವುದು ಕಂಡು ಬಂತು. ತಕ್ಷಣ ಸಂಬಂಧಿಸಿದ ಅಧಿಕಾರಿಗಳ ಗಮನಕ್ಕೆ ತರುವ ಮೂಲಕ ಶೀಘ್ರದಲ್ಲೇ ಬಾಗಿಲನ್ನು ಬದಲಾಯಿಸಿ ಸರಿಪಡಿಸುವಂತೆ ಸೂಚಿಸಲಾಯಿತು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು, ಸೆಕ್ಟರ್ ಅಧಿಕಾರಿಗಳು ಹಾಜರಿದ್ದರು.

> ಚುನಾವಣೆ ಕರ್ತವ್ಯದ ಜೊತೆಗೆ ಶಾಲಾ ಮಕ್ಕಳಿಗೆ ನೀಡುವ ಆಹಾರದ ಗುಣಮಟ್ಟವನ್ನು ಸ್ವತಃ ಶಾಲೆಯಲ್ಲಿ ಬಿಸಿಯೂಟ ಸವಿಯುವ ಮೂಲಕ ಇಓ ಅವರು ಪರಿಶೀಲಿಸಿದರು. ಚಿಕ್ಕನರಗುಂದ ಗ್ರಾಮ ಪಂಚಾಯತ್ ವ್ಯಾಪ್ತಿಯ ಕರ್ನಾಟಕ ಪಬ್ಲಿಕ್ ಹೈಸ್ಕೂಲ್ ಶಾಲೆಯಲ್ಲಿ ಮಕ್ಕಳ ಜೊತೆ ಇಓ ಸೋಮಶೇಖರ್ ಬಿರಾದರ್ ಬಿಸಿಯೂಟ ಸವಿದರು. ಈ ವೇಳೆ ಅಡುಗೆ ಕೋಣೆಗೆ ತೆರಳಿ ಅಡುಗೆ ಸಾಮಾಗ್ರಿಗಳನ್ನು ಪರಿಶೀಲಿಸಿ ಅಡುಗೆಗೆ ಬಳಸುವ ತರಕಾರಿ, ಬೇಳೆ ಕಾಳುಗಳ ಗುಣಮಟ್ಟವನ್ನು ಪರಿಶೀಲಿಸಿದರು. ಮಕ್ಕಳಿಗೆ ನೀಡುವ ಅಡುಗೆಯಲ್ಲಿ ತರಕಾರಿಗಳನ್ನು ಹೆಚ್ಚಾಗಿ ಬಳಸಿಕೊಳ್ಳುವಂತೆ ಸಲಹೆ ನೀಡಿದರು. ಅಲ್ಲದೆ ಸರ್ಕಾರ ಮಕ್ಕಳ ಕಲಿಕೆಗೆ ಸಾಕಷ್ಟು ಸೌಲಭ್ಯಗಳನ್ನು ಕಲ್ಪಿಸಿದೆ. ಸರ್ಕಾರದ ಈ ಸೌಲಭ್ಯಗಳನ್ನು ಶಾಲಾ ಮಕ್ಕಳ ಸದುಪಯೋಗಪಡಿಸಿಕೊಂಡು ಕಲಿಕೆಯಲ್ಲಿ ಮೇಲುಗೈ ಸಾಧಿಸಬೇಕೆಂದು ಮಾರ್ಗದರ್ಶನ ಮಾಡಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka